ಸಂಪುಟ 01 । ಸಂಚಿಕೆ 209 ಶನಿವಾರ 03 ಅಕ್ಟೋಬರ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1)ವಿಶ್ವ ಕಾರ್ಡ್ ತಯಾರಿಕಾ ದಿನ (World Card Making Day): ಪ್ರತಿ ವರ್ಷ ಅಕ್ಟೋಬರ್‌ನ ಮೊದಲ ಶನಿವಾರ ಆಚರಿಸಲಾಗುತ್ತದೆ. ಶುಭಾಶಯ ಮತ್ತು ಕೈಯಿಂದ ತಯಾರಿಸಿದ ಕಾರ್ಡ್‌ಗಳನ್ನು ರಚಿಸುವ ಕಲೆಯನ್ನು ಪ್ರೋತ್ಸಾಹಿಸುವ ದಿನ.

2)ರಾಷ್ಟ್ರೀಯ ಬಾಯ್‌ಫ್ರೆಂಡ್ ದಿನ (National Boyfriend Day): ರೊಮ್ಯಾಂಟಿಕ್ ಸಂಗಾತಿಗಳ ಮೇಲಿನ ಪ್ರೀತಿ, ಕೃತಜ್ಞತೆ ಮತ್ತು ಮೆಚ್ಚುಗೆಯನ್ನು ವ್ಯಕ್ತಪಡಿಸಲು ಮೀಸಲಾದ ದಿನ.

ಸುಭಾಷಿತ

ತನ್ನ ಕರ್ತವ್ಯವನ್ನು ಸರಿಯಾಗಿ
ಮಾಡುತ್ತಿರುವವನಿಗೆ ಜಗತ್ತು ಎಂದಿಗೂ
ಬೇಸರ ಎನಿಸುವುದಿಲ್ಲ.

– ಮಹಾತ್ಮ ಗಾಂಧಿ

ಗಾಂಧಿ ತತ್ವ ಇಡೀ ಜಗತ್ತನ್ನೇ ಪ್ರೇರೇಪಿಸಿದೆ : ಪ್ರಧಾನಿ ಮೋದಿ

❏ ನೈಜ್ಯ ದೇಸೆ ನ್ಯೂಸ್

ನವದೆಹಲಿ:ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಮಹಾತ್ಮ ಗಾಂಧಿಯವರ ಜನ್ಮದಿನದಂದು ಅವರಿಗೆ ಗೌರವ ನಮನ ಸಲ್ಲಿಸಿದರು.ಗಾಂಧಿಯವರ ಕಾಲಾತೀತ ಸಂದೇಶವು ಉತ್ತಮ ಸಮಾಜ ಮತ್ತು ವಿಕಸಿತ ಭಾರತದತ್ತ ಎಲ್ಲರಿಗೂ ಮಾರ್ಗದರ್ಶನ ನೀಡುತ್ತಲೇ ಇರುತ್ತದೆ ಎಂದು ಅವರು ಹೇಳಿದರು.



ಬಾಪೂ ಅವರ ಸಂಪೂರ್ಣ ಜೀವನವು ಸತ್ಯ, ಅಹಿಂಸೆ, ಸಹಾನುಭೂತಿ ಮತ್ತು ಸೇವೆಯ ದಾರಿದೀಪವಾಗಿದ್ದು, ಇದು ಎಲ್ಲಾ ಯುಗಗಳಲ್ಲೂ ಮಾನವಕುಲಕ್ಕೆ ಮಾರ್ಗದರ್ಶನ ನೀಡುತ್ತಲೇ ಇರುತ್ತದೆ ಎಂದು ಮೋದಿ ತಿಳಿಸಿದರು. ಬಾಪೂ ಅವರ ಕಾಲಾತೀತ ಸಂದೇಶವು ಉತ್ತಮ ಸಮಾಜ ಮತ್ತು ವಿಕಸಿತ ಭಾರತದತ್ತ ನಮ್ಮನ್ನು ಮುನ್ನಡೆಸಲಿ ಎಂದು ಮೋದಿ ಎಕ್ಸ್ ಪೋಸ್ಟ್‌ನಲ್ಲಿ ಹೇಳಿದ್ದಾರೆ. ವೀಡಿಯೊ ಸಂದೇಶದ ಮೂಲಕ ಮಾತನಾಡಿದ ಪ್ರಧಾನಿ, ರಾಷ್ಟ್ರಕ್ಕೆ ಈ ದಿನದ ಮಹತ್ವ ಎಲ್ಲರಿಗೂ ತಿಳಿದಿದೆ ಎಂದರು. ಅವರ ಸಿದ್ಧಾಂತವು ಇಡೀ ಜಗತ್ತನ್ನೇ ಪ್ರೇರೇಪಿಸಿದೆ. ಮಹಾತ್ಮ ಗಾಂಧಿಯವರು ಅಂತಹ ವ್ಯಕ್ತಿತ್ವವಾಗಿದ್ದು, ಅಧಿಕಾರದಿಂದ ದೂರವಿದ್ದರೂ ಅವರು ಲಕ್ಷಾಂತರ ಜನರ ಹೃದಯದಲ್ಲಿ ನೆಲೆಸಿದ್ದಾರೆ ಎಂದು ಮೋದಿ ಹೇಳಿದರು. ಮಹಾತ್ಮ ಗಾಂಧಿಯವರ ಸಿದ್ಧಾಂತವು ಮುಂದಿನ ದಿನಗಳಲ್ಲಿಯೂ ಮಾನವಕುಲಕ್ಕೆ ಮಾರ್ಗದರ್ಶನ ಮತ್ತು ಸ್ಫೂರ್ತಿ ನೀಡುತ್ತಲೇ ಇರುತ್ತದೆ ಎಂದು ತಾವು ನಂಬಿರುವುದಾಗಿ ಪ್ರಧಾನಿ ಹೇಳಿದರು.

ಗುರು ಶ್ರೇಷ್ಠ ಪ್ರಶಸ್ತಿಗೆ ಸನ್ ರೈಸ್ ಕಾಲೇಜಿನ ಮೂವರು ಉಪನ್ಯಾಸಕರು ಆಯ್ಕೆ

❏ ನೈಜ್ಯ ದೇಸೆ ನ್ಯೂಸ್

ಸಿಂಧನೂರು: ತಾಲೂಕು ಖಾಸಗಿ ಕಾಲೇಜು ಆಡಳಿತ ಮಂಡಳಿಗಳ ಒಕ್ಕೂಟದ ವತಿಯಿಂದ ಪ್ರತಿವರ್ಷ ನೀಡಲಾಗುವ ಪ್ರತಿಷ್ಠಿತ ತಾಲೂಕು ಮಟ್ಟದ 'ಗುರು ಶ್ರೇಷ್ಠ' ಪ್ರಶಸ್ತಿಗೆ ಸಿಂಧನೂರಿನ ಸನ್ ರೈಸ್ ಶಿಕ್ಷಣ ಸಂಸ್ಥೆಯ ಮೂವರು ಉಪನ್ಯಾಸಕರು ಆಯ್ಕೆಯಾಗಿರುವುದು ಸಂಸ್ಥೆಗೆ ಹೆಮ್ಮೆಯ ಸಂಗತಿಯಾಗಿದೆ.

ಸನ್ ರೈಸ್ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೂರು ಪ್ರಮುಖ ಶಿಕ್ಷಣ ವಿಭಾಗಗಳಾದ ಸನ್ ರೈಸ್ ಫಾರ್ಮಸಿ ಕಾಲೇಜು, ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಹಾಗೂ ಸನ್ ರೈಸ್ ಪ್ಯಾರಾ ಮೆಡಿಕಲ್ ಕಾಲೇಜುಗಳಿಂದ ತಲಾ ಒಬ್ಬರಂತೆ ಮೂವರು ಉಪನ್ಯಾಸಕರು ಈ ಪ್ರತಿಷ್ಠಿತ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಸನ್ ರೈಸ್ ಫಾರ್ಮಸಿ ಕಾಲೇಜಿನಿಂದ ದಿವಾನ್ ಸಾಗರ್ ರತೀಶ್, ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನಿಂದ ಶೋಭಾ ಹಾಗೂ ಸನ್ ರೈಸ್ ಪ್ಯಾರಾ ಮೆಡಿಕಲ್ ಕಾಲೇಜಿನಿಂದ ಆಶು ಪಾಷಾ ಅವರು 'ಗುರು ಶ್ರೇಷ್ಠ' ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಮತ್ತು ವೃತ್ತಿಪರ ಬೆಳವಣಿಗೆಗೆ ನೀಡುತ್ತಿರುವ ಕೊಡುಗೆಯನ್ನು ಗುರುತಿಸಿ ಇವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಅ.3ರಂದು ಅದ್ದೂರಿ ಪ್ರಶಸ್ತಿ ಪ್ರದಾನ ಸಮಾರಂಭ ತಾಲೂಕು ಖಾಸಗಿ ಕಾಲೇಜುಗಳ ಆಡಳಿತ ಮಂಡಳಿ ಒಕ್ಕೂಟದ ವತಿಯಿಂದ ಅಕ್ಟೋಬರ್ 3ರಂದು ಶನಿವಾರ ಸಂಜೆ 4 ಗಂಟೆಗೆ ಸಿಂಧನೂರಿನ ಸತ್ಯಾ ಗಾರ್ಡನ್‌ನಲ್ಲಿ 'ಗುರು ಶ್ರೇಷ್ಠ' ಪ್ರಶಸ್ತಿ ಪ್ರದಾನ ಹಾಗೂ ಸನ್ಮಾನ ಸಮಾರಂಭವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮಕ್ಕೆ ಸೇಗುಣಸಿ ವಿರಕ್ತಮಠದ ಪರಮಪೂಜ್ಯ ಶ್ರೀ ಮಹಾಂತ ಸ್ವಾಮೀಜಿಗಳು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಸಿಂಧನೂರು ಶಾಸಕರು ಹಾಗೂ ರಾಯಚೂರು ಜಿಲ್ಲಾ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ಹಂಪನಗೌಡ ಬಾದರ್ಲಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಸಂಸದರಾದ ಸನ್ಮಾನ್ಯ ಶ್ರೀ ಕೆ. ವಿರೂಪಾಕ್ಷಪ್ಪ, ಮಾಜಿ ಸಚಿವರಾದ ಸನ್ಮಾನ್ಯ ಶ್ರೀ ವೆಂಕಟರಾವ್ ನಾಡಗೌಡ, ವಿಧಾನ ಪರಿಷತ್ ಸದಸ್ಯರಾದ ಸನ್ಮಾನ್ಯ ಶ್ರೀ ಬಸನಗೌಡ ಬಾದರ್ಲಿ, ರಾಯಚೂರು ಜಿಲ್ಲಾ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಉಪಾಧ್ಯಕ್ಷರಾದ ಸನ್ಮಾನ್ಯ ಶ್ರೀ ಎಂ. ದೊಡ್ಡಬಸವರಾಜ್, ಸಿಂಧನೂರು ಪ.ಪೂ. ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಸನ್ಮಾನ್ಯ ಶ್ರೀ ಸೋಮಶೇಖರಪ್ಪ ಹೊಕ್ರಾಣಿ ಹಾಗೂ ಸಿಂಧನೂರು ತಾಲೂಕು ಖಾಸಗಿ ಶಾಲಾ-ಕಾಲೇಜುಗಳ ಒಕ್ಕೂಟದ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ವೈ. ನರೇಂದ್ರನಾಥ್ ಅವರು ಭಾಗವಹಿಸಲಿದ್ದಾರೆ.

ವಿಶೇಷ ಸನ್ಮಾನಿತರಾಗಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರಿನ ಸದಸ್ಯರಾದ ಶ್ರೀ ಎನ್. ಸತ್ಯನಾರಾಯಣ ಶ್ರೇಷ್ಠಿ ಅವರು ಆಗಮಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕು ಖಾಸಗಿ ಕಾಲೇಜು ಆಡಳಿತ ಮಂಡಳಿ ಒಕ್ಕೂಟದ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ಪರಶುರಾಮ ಮಲ್ಲಾಪುರ ಅವರು ವಹಿಸಲಿದ್ದಾರೆ.

ಸನ್ ರೈಸ್ ಶಿಕ್ಷಣ ಸಂಸ್ಥೆಯ ಮೂರು ವಿಭಾಗಗಳಿಂದ ಮೂವರು ಉಪನ್ಯಾಸಕರು ಒಂದೇ ಸಂದರ್ಭದಲ್ಲಿ ಪ್ರತಿಷ್ಠಿತ 'ಗುರು ಶ್ರೇಷ್ಠ' ಪ್ರಶಸ್ತಿಗೆ ಆಯ್ಕೆಯಾಗಿರುವುದು ಸಂಸ್ಥೆಯ ಶೈಕ್ಷಣಿಕ ಗುಣಮಟ್ಟ, ಉಪನ್ಯಾಸಕರ ಸಮರ್ಪಣೆ ಹಾಗೂ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಸಂಸ್ಥೆ ವಹಿಸುತ್ತಿರುವ ಪಾತ್ರಕ್ಕೆ ದೊರೆತ ಗೌರವವಾಗಿದೆ ಎಂದು ಸಂಸ್ಥೆಯ ವತಿಯಿಂದ ಹರ್ಷ ವ್ಯಕ್ತಪಡಿಸಲಾಗಿದೆ.


ಶಿಕ್ಷಣ ಕ್ಷೇತ್ರದ ಗಣ್ಯರು, ಶಿಕ್ಷಣ ಪ್ರೇಮಿಗಳು, ಉಪನ್ಯಾಸಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ತಾಲೂಕು ಖಾಸಗಿ ಕಾಲೇಜು ಆಡಳಿತ ಮಂಡಳಿಗಳ ಒಕ್ಕೂಟ ಹಾಗೂ ಸನ್ ರೈಸ್ ಶಿಕ್ಷಣ ಸಂಸ್ಥೆಯ ವತಿಯಿಂದ ಮನವಿ ಮಾಡಲಾಗಿದೆ.



ದಿವಾನ್ ಸಾಗರ್ ರತೀಶ್ ಇವರು ರತೀಶ್ ಲಾಲ್ ದಿವಾನ್ ಹಾಗೂ ಬಿನೋಥಾ ದಿವಾನ್ ಅವರ ಏಕೈಕ ಪುತ್ರರಾಗಿ ಜನಿಸಿದ್ದಾರೆ ಅವರು ತಮ್ಮ ಪ್ರಾಥಮಿಕ ಶಿಕ್ಷಣವನ್ನು ಮುಂಬೈನ ಸೇಂಟ್ ಕ್ಸೇವಿಯರ್ ಶಾಲೆಯಲ್ಲಿ ಪೂರ್ಣಗೊಳಿಸಿದ ಅವರು, ನಂತರ ಪ್ರೌಢಶಿಕ್ಷಣವನ್ನು ದುಡ್ಡುಪೂಡಿ ಶಾಲೆಯಲ್ಲಿ ಮುಂದುವರಿಸಿದರು.ತಮ್ಮ ಪದವಿ ಪೂರ್ವ ಶಿಕ್ಷಣವನ್ನು ಬಳ್ಳಾರಿಯ ನಂದಿ ಇಂಟರ್‌ನ್ಯಾಷನಲ್ ಕಾಲೇಜಿನಲ್ಲಿ ಪೂರ್ಣಗೊಳಿಸಿದ ಅವರು, ನಂತರ ರಾಯಚೂರಿನ VLC(P)ಯಲ್ಲಿ ಪದವಿ ಶಿಕ್ಷಣವನ್ನು ಪಡೆದಿದ್ದಾರೆ.ಶಿಕ್ಷಣದ ಜೊತೆಗೆ ಕ್ರೀಡೆಗಳಲ್ಲಿಯೂ ಆಸಕ್ತಿ ಹೊಂದಿರುವ ದಿವಾನ್ ಸಾಗರ್ ರತೀಶ್ ಅವರಿಗೆ ಹೊರಾಂಗಣ ಕ್ರೀಡೆಗಳಲ್ಲಿ ಭಾಗವಹಿಸುವುದು ಪ್ರಮುಖ ಹವ್ಯಾಸವಾಗಿದೆ. ಕ್ರೀಡೆಯ ಮೂಲಕ ದೈಹಿಕ ಸದೃಢತೆ, ಶಿಸ್ತು ಹಾಗೂ ತಂಡದ ಮನೋಭಾವ ಬೆಳೆಸಿಕೊಳ್ಳುವಲ್ಲಿ ಅವರು ಆಸಕ್ತಿ ಹೊಂದಿದ್ದಾರೆ. ಶೈಕ್ಷಣಿಕ ಕ್ಷೇತ್ರದಲ್ಲಿ ತಮ್ಮ ಜ್ಞಾನ ಹಾಗೂ ಅನುಭವವನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಳ್ಳುತ್ತಾ, ಉತ್ತಮ ಬೋಧಕರಾಗಿ ಗುರುತಿಸಿಕೊಳ್ಳುತ್ತಿರುವ ದಿವಾನ್ ಸಾಗರ್ ರತೀಶ್ ಅವರ ಸೇವೆಯನ್ನು ಗುರುತಿಸಿ ಸನ್ ರೈಸ್ ಡಿ ಫಾರ್ಮಸಿ ಕಾಲೇಜಿನಿಂದ ತಾಲೂಕು ಖಾಸಗಿ ಕಾಲೇಜುಗಳ ಆಡಳಿತ ಮಂಡಳಿ ಒಕ್ಕೂಟದಿಂದ ಕೊಡಮಾಡುವ 'ಗುರು ಶ್ರೇಷ್ಠ' ಪ್ರಶಸ್ತಿಗೆ ಆಯ್ಕೆ ಆಗಿರುವುದು ಹೆಮ್ಮೆಯ ಸಂಗತಿಯಾಗಿದೆ.ಇವರು ಶಿಕ್ಷಣ ಕ್ಷೇತ್ರದಲ್ಲಿ ಆಸಕ್ತಿ ಹಾಗೂ ವಿದ್ಯಾರ್ಥಿಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ.



ಶೋಭಾ ಇವರು ಚನ್ನಪ್ಪ ಹಾಗೂ ಚಂದ್ರಕಲಾ ದಂಪತಿಯ ಮಗಳಾಗಿ ಜನಿಸಿದ್ದಾರೆ ಇವರು ತಮ್ಮ ಪ್ರಾಥಮಿಕ ಶಿಕ್ಷಣವನ್ನು ಸಿಂಧನೂರಿನ ವಿಕಾಸ ಭಾರತಿ ಶಾಲೆಯಲ್ಲಿ ಪೂರ್ಣಗೊಳಿಸಿದ ಅವರು, ಪ್ರೌಢಶಿಕ್ಷಣವನ್ನು ಸಿಂಧನೂರಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ ಮುಂದುವರಿಸಿದರು. ನಂತರ ಸಿಂಧನೂರಿನ ದುಡ್ಡುಪೂಡಿ ಬಾಲಕಿಯರ ಕಾಲೇಜಿನಲ್ಲಿ ಪಿಯುಸಿ ಶಿಕ್ಷಣವನ್ನು ಪೂರ್ಣಗೊಳಿಸಿದರು. ವೈದ್ಯಕೀಯ ಹಾಗೂ ಆರೋಗ್ಯ ಸೇವಾ ಕ್ಷೇತ್ರದಲ್ಲಿ ಆಸಕ್ತಿ ಹೊಂದಿರುವ ಶೋಭಾ ಅವರು ಹಾಸನದ ಮಂಗಳಾ ಕಾಲೇಜ್ ಆಫ್ ನರ್ಸಿಂಗ್‌ನಲ್ಲಿ B.Sc. ನರ್ಸಿಂಗ್ ಪದವಿಯನ್ನು ಪಡೆದಿದ್ದಾರೆ. ನಂತರ ತಮ್ಮ ಶೈಕ್ಷಣಿಕ ಅರ್ಹತೆಯನ್ನು ಮತ್ತಷ್ಟು ವಿಸ್ತರಿಸುವ ನಿಟ್ಟಿನಲ್ಲಿ ಹಾಸನದ ರಾಜೀವ್ ಕಾಲೇಜ್ ಆಫ್ ನರ್ಸಿಂಗ್‌ನಲ್ಲಿ M.Sc. ನರ್ಸಿಂಗ್ ಸ್ನಾತಕೋತ್ತರ ಪದವಿಯನ್ನು ಪೂರ್ಣಗೊಳಿಸಿದ್ದಾರೆ. ನರ್ಸಿಂಗ್ ಶಿಕ್ಷಣ ಕ್ಷೇತ್ರದಲ್ಲಿ ತಮ್ಮ ಜ್ಞಾನ ಮತ್ತು ಅನುಭವವನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಳ್ಳುತ್ತಾ, ಉತ್ತಮ ಬೋಧಕರಾಗಿ ಸೇವೆ ಸಲ್ಲಿಸುತ್ತಿರುವ ಶೋಭಾ ಅವರ ಶೈಕ್ಷಣಿಕ ಹಾಗೂ ಬೋಧನಾ ಸೇವೆಯನ್ನು ಗುರುತಿಸಿ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಸಿಂಧನೂರಿನಿಂದ ತಾಲೂಕು ಖಾಸಗಿ ಆಡಳಿತ ಮಂಡಳಿ ಒಕ್ಕೂಟ ಸಿಂಧನೂರು ಇವರು ಕೊಡಮಾಡುವ 'ಗುರು ಶ್ರೇಷ್ಠ' ಪ್ರಶಸ್ತಿಗೆ ಆಯ್ಕೆಯಾಗಿರುವುದು ಹೆಮ್ಮೆಯ ಸಂಗತಿಯಾಗಿದೆ.



ಆಶು ಪಾಷಾ ಶಿರಗುಂಪಿ ಇವರು ರಾಜಾಸಾಬ್ ಶಿರಗುಂಪಿ ಹಾಗೂ ಮಾಬೂಬಿ ಶಿರಗುಂಪಿ ದಂಪತಿಗಳ ಎರಡನೆಯ ಮಗನಾಗಿ ಜನಿಸಿದರು ಇವರು ಶಾರದಾ ಶಾಲೆ ಕಾಟಿಬೇಸ್ ನಲ್ಲಿ ಪ್ರಾಥಮಿಕ ಶಿಕ್ಷಣ ಮುಗಿಸಿ ಎ.ವಿ.ಎಸ್ ಶಾಲೆಯಲ್ಲಿ Sslc ಮುಗಿಸಿದರು ತದನಂತರ ಅವರು ರಾಯಚೂರಿನ ನಂದಿನಿ ಇನ್‌ಸ್ಟಿಟ್ಯೂಟ್ ಆಫ್ ಅಲೈಡ್ ಹೆಲ್ತ್ ಸೈನ್ಸಸ್ DMLT (ಡಿಪ್ಲೊಮಾ ಇನ್ ಮೆಡಿಕಲ್ ಲ್ಯಾಬೊರೇಟರಿ ಟೆಕ್ನಾಲಜಿ) ಶಿಕ್ಷಣವನ್ನು ಪಡೆದಿದ್ದು ಪ್ಯಾರಾಮೆಡಿಕಲ್ ಬೋರ್ಡಿಗೆ 2ನೇ ಸ್ಥಾನ ಪಡೆದುಕೊಂಡರು,ನಂತರ ಮೈಸೂರಿನ ಮೈಸೂರು ಮೆಡಿಕಲ್ ಕಾಲೇಜು ಮತ್ತು ರಿಸರ್ಚ್ ಇನ್‌ಸ್ಟಿಟ್ಯೂಟ್‌ನಲ್ಲಿ B.Sc. MLT (ಬ್ಯಾಚುಲರ್ ಆಫ್ ಸೈನ್ಸ್ ಇನ್ ಮೆಡಿಕಲ್ ಲ್ಯಾಬೊರೇಟರಿ ಟೆಕ್ನಾಲಜಿ) ಪದವಿಯನ್ನು ಪಡೆದಿದ್ದು ಅಲ್ಲಿಯೂ ಕೂಡ ಯುನಿವರ್ಸಿಟಿ ರಾಂಕ್ ಅನ್ನು ತಮ್ಮದಾಗಿಸಿಕೊಂಡರು ವೈದ್ಯಕೀಯ ಪ್ರಯೋಗಾಲಯ ಕ್ಷೇತ್ರದಲ್ಲಿ ತಮ್ಮ ಜ್ಞಾನವನ್ನು ಮತ್ತಷ್ಟು ವಿಸ್ತರಿಸುವ ಉದ್ದೇಶದಿಂದ ದಾವಣಗೆರೆಯ ಸಂಜೀವಿನಿ ಇನ್‌ಸ್ಟಿಟ್ಯೂಟ್ ಆಫ್ ಅಲೈಡ್ ಹೆಲ್ತ್ ಸೈನ್ಸಸ್‌ನಲ್ಲಿ M.Sc. MLT ಪ್ಯಾಥಾಲಜಿ ಸ್ನಾತಕೋತ್ತರ ಶಿಕ್ಷಣವನ್ನು ಪೂರ್ಣಗೊಳಿಸಿದ್ದಾರೆ. ಶಿಕ್ಷಣದ ಜೊತೆಗೆ ಬೋಧನಾ ಕ್ಷೇತ್ರದಲ್ಲಿಯೂ ಆಸಕ್ತಿ ಹೊಂದಿರುವ ಆಶುಪಾಷಾ ಆರ್. ಶಿರಗುಂಪಿ ಅವರು ವಿದ್ಯಾರ್ಥಿಗಳಿಗೆ ವಿಷಯವನ್ನು ಸರಳವಾಗಿ ಅರ್ಥೈಸುವ ಮೂಲಕ ಜ್ಞಾನ ಹಂಚಿಕೊಳ್ಳುವ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ವೈದ್ಯಕೀಯ ಪ್ರಯೋಗಾಲಯ ವಿಜ್ಞಾನ ಕ್ಷೇತ್ರದ ಜ್ಞಾನವನ್ನು ವಿದ್ಯಾರ್ಥಿಗಳಿಗೆ ತಲುಪಿಸುವಲ್ಲಿ ಅವರು ವಿಶೇಷ ಆಸಕ್ತಿ ಹೊಂದಿದ್ದಾರೆ.ಆದ್ದರಿಂದ ಸನ್ ರೈಸ್ ಪ್ಯಾರಾ ಮೆಡಿಕಲ್ ಕಾಲೇಜು ಸಿಂಧನೂರಿಂದ ತಾಲೂಕು ಖಾಸಗಿ ಕಾಲೇಜುಗಳ ಆಡಳಿತ ಮಂಡಳಿ ಒಕ್ಕೂಟದಿಂದ ಕೊಡಮಾಡುವ ಗುರು ಶ್ರೇಷ್ಠ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.



ಗಾಂಧೀಜಿ ತತ್ವ-ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ರವೀಂದ್ರ ಬಾಕಳೆ

❏ ನೈಜ್ಯ ದೇಸೆ ನ್ಯೂಸ್

ಕುಷ್ಟಗಿ: ಪಟ್ಟಣದ ತಾಲ್ಲೂಕು ಗೃಹರಕ್ಷಕ ದಳದ ಕಚೇರಿಯಲ್ಲಿ ಶುಕ್ರವಾರ ಮಹಾತ್ಮ ಗಾಂಧೀಜಿ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮಹಾತ್ಮ ಗಾಂಧೀಜಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, 'ರಘುಪತಿ ರಾಘವ ರಾಜಾರಾಮ್' ಗೀತೆಯನ್ನು ಹಾಡುವ ಮೂಲಕ ಗೌರವ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಘಟಕಾಧಿಕಾರಿ ಹಾಗೂ ಸೀನಿಯರ್ ಪ್ಲಟೂನ್ ಕಮಾಂಡರ್ ರವೀಂದ್ರ ಬಾಕಳೆ ಮಾತನಾಡಿ, ಮಹಾತ್ಮ ಗಾಂಧೀಜಿಯವರ ತತ್ವ, ಆದರ್ಶ ಹಾಗೂ ಸರಳ ಜೀವನ ಮೌಲ್ಯಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸತ್ಯ, ಅಹಿಂಸೆ ಹಾಗೂ ಶಾಂತಿಯ ಮಾರ್ಗದಲ್ಲಿ ನಡೆಯುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೊಡುಗೆ ನೀಡಬೇಕು ಎಂದು ಹೇಳಿದರು.

ಪ್ಲಟೂನ್ ಕಮಾಂಡರ್ ನಾಗರಾಜ ಬಡಿಗೇರ, ಗೃಹರಕ್ಷಕರಾದ ಮಲ್ಲಪ್ಪ ಕಂಚಿ, ರಾಜೇಸಾಬ ಮಾಟಲದಿನ್ನಿ, ಮಲ್ಲಿಕಾರ್ಜುನ ಬಳೂಟಗಿ, ಸೈಯದ್ ತಾಜುದ್ದೀನ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



ಶ್ರೀ ಗುರು ಶಂಕರಲಿಂಗ ಲಘು ರಥೋತ್ಸವ ಅದ್ದೂರಿ ನಡೆಯಿತು

❏ ನೈಜ್ಯ ದೇಸೆ ನ್ಯೂಸ್

ಹಿರೇಮನ್ನಾಪುರ: ಕುಷ್ಟಗಿ ತಾಲೂಕಿನ ಹಿರೇಮನ್ನಾಪುರ ಗ್ರಾಮದ ಶ್ರೀ ಗುರು ಶಂಕರಲಿಂಗ ಮಠದ 42ನೇ ಜಾತ್ರಾ ಮಹೋತ್ಸವದ ಅಂಗವಾಗಿ ಶುಕ್ರವಾರ ಸಂಜೆ 6 ಗಂಟೆಗೆ ಲಘು ರಥೋತ್ಸವವು ಭಕ್ತರ ಸಂಭ್ರಮದ ನಡುವೆ ಅದ್ದೂರಿಯಾಗಿ ಜರುಗಿತು.

ಜಾತ್ರಾ ಮಹೋತ್ಸವದ ಅಂಗವಾಗಿ ಧ್ವಜಾರೋಹಣ ಕಾರ್ಯಕ್ರಮ ನೆರವೇರಿದ ಬಳಿಕ ಲಘು ರಥೋತ್ಸವಕ್ಕೆ ಚಳಗೇರಾ ಶ್ರೀ ವೀರಸಂಗಮೇಶ್ವರ ಶಿವಾಚಾರ್ಯ ಸ್ವಾಮೀಜಿ ಹಾಗೂ ಶ್ರೀ ಶಂಕರಲಿಂಗ ಮಠದ ಧರ್ಮಾಧಿಕಾರಿ ಪೂಜ್ಯ ಡಾ. ಬಾಲಚಂದ್ರಪ್ಪ ತಾತನವರು ಚಾಲನೆ ನೀಡಿದರು.

ರಥೋತ್ಸವದ ಸಂದರ್ಭದಲ್ಲಿ ಡೊಳ್ಳು, ಬ್ಯಾಂಡ್-ಬಾಜಾ, ಭಜನೆ, ಕೇಕೆ ಹಾಗೂ ಕುಣಿತ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಭಕ್ತರ ಸಂಭ್ರಮಕ್ಕೆ ಮೆರುಗು ನೀಡಿದವು. ರಥೋತ್ಸವದಲ್ಲಿ ಹಿರೇಮನ್ನಾಪುರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ನೂರಾರು ಭಕ್ತರು, ಮಹಿಳೆಯರು ಹಾಗೂ ಯುವಕರು ಉತ್ಸಾಹದಿಂದ ಪಾಲ್ಗೊಂಡರು. ಶ್ರೀ ಗುರು ಶಂಕರಲಿಂಗ ಸ್ವಾಮಿಯ ರಥವು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸುತ್ತಿದ್ದಂತೆ ಭಕ್ತರು ಜಯಘೋಷ ಮೊಳಗಿಸಿ ಭಕ್ತಿಭಾವ ಮೆರೆದರು. ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಇಡೀ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.



ಮೆದುಳು ಜ್ವರ ನಿಯಂತ್ರಣ ಜಾಗೃತಿ: ತಾಲೂಕು ತಂಡ ಗ್ರಾಮ ಭೇಟಿ

❏ ನೈಜ್ಯ ದೇಸೆ ನ್ಯೂಸ್

ಸಿಂಧನೂರು: ಜಿಲ್ಲಾ ಪಂಚಾಯತ್ ರಾಯಚೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ತಾಲೂಕು ಆರೋಗ್ಯ ಇಲಾಖೆ ಸಿಂಧನೂರು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಸಾಲಗುಂದ ಇವರ ಸಂಯುಕ್ತ ಆಶ್ರಯದಲ್ಲಿ ಸಾಲಗುಂದ ಗ್ರಾಮದಲ್ಲಿ ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ತಂಡ ಮತ್ತು ಸರ್ವೇಕ್ಷಣಾಧಿಕಾರಿಗಳ ತಂಡವು ಭೇಟಿ ನೀಡಿತು. ಈ ವೇಳೆ ಸಮುದಾಯ ಮಟ್ಟದ ಶಿಕ್ಷಣ ಪಡೆಯಲು ಬಂದಿದ್ದ ಸನ್ ರೈಜ್ ಕಾಲೇಜಿನ ವಿದ್ಯಾರ್ಥಿಗಳೊಂದಿಗೆ ಗ್ರಾಮದ ವಿವಿಧ ಬಡಾವಣೆಗಳಲ್ಲಿ ಸೊಳ್ಳೆ ಸಾಂದ್ರತೆಯ ಸಮಗ್ರ ಪರಿಶೀಲನೆ ನಡೆಸಿದ ತಂಡ ಸಾರ್ವಜನಿಕರಿಗೆ ಆರೋಗ್ಯ ಶಿಕ್ಷಣ ನೀಡಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ವಿ.ಬಿ.ಡಿ. ಮೇಲ್ವಿಚಾರಕರಾದ ಎಫ್. ಎ. ಹಣಗಿ ಅವರು ಮಾತನಾಡಿ, ಮೆದುಳು ಜ್ವರದ ಪ್ರಮುಖ ಲಕ್ಷಣಗಳಾದ ತೀವ್ರ ತಲೆನೋವು, ಜ್ವರ, ಜ್ವರದಲ್ಲಿ ಬಡಬಡಿಸುವುದು ಹಾಗೂ ಮಂಪರು,ಗೋಣು ಸೆಟೆಯುವ ಲಕ್ಷಣ,ಜೀವನ ತುಂಬ ಕೈಕಾಲು ಸ್ವಾಧೀನ ಕಳೆದುಕೊಳ್ಳು ಲಕ್ಷಣ ಬರುವ ಕುರಿತು ವಿವರಿಸಿದರು.

ಜೊತೆಗೆ ಈ ರೋಗವನ್ನು ಹರಡುವ ಕ್ಯೂಲೆಕ್ಸ್ ಸೊಳ್ಳೆಗಳ ಉತ್ಪತ್ತಿಗಳು ಹೆಚ್ಚಾನು ಹೆಚ್ಚು ಸಮೀಪದ ಗದ್ದೆ ಗಳಲ್ಲಿ ನಿಲ್ಲುವ ನೀರು, ಕೊಳಚೆ ಹಾಗೂ ನಿಂತ ನೀರಲ್ಲಿ ಮೊಟ್ಟೆಯಿಟ್ಟು ಬೆಳೆಯುವ ವೈಷ್ಣವಿ ಜಾತಿಯ ಸೊಳ್ಳೆಗಳ ಜೀವನ ಚಕ್ರ ಮತ್ತು ಸೊಂಕಿತ ಸೊಳ್ಳೆಯ ಕಡಿತವು ಕೆಲವು ದಿನ ಹಂದಿಗಳ ಯುಕೃತನಲ್ಲಿ ಮತ್ತು ಕೊಕ್ಕರೆಗಳಿಗೆ ಅವಲಂಭಿತವಾಗಿ ತನ್ನ ಶಕ್ತಿ ಹೆಚ್ಚಿಸಿಕೊಂಡು ಮನುಷ್ಯನಿಗೆ ವಿಶೇಷವಾಗಿ ಸಂಜೆ ಹಾಗೂ ಮುಸ್ಸಂಜೆಯ ವೇಳೆಯಲ್ಲಿ ಕಚ್ಚುವ ವಿಧಾನದ ಬಗ್ಗೆ ಗ್ರಾಮಸ್ಥರಿಗೆ ಸವಿಸ್ತಾರವಾಗಿ ಮನವರಿಕೆ ಮಾಡಿಕೊಟ್ಟರು.

ನಂತರ ಸಾಂಕ್ರಾಮಿಕ ರೋಗಶಾಸ್ತ್ರಜ್ಞರಾದ ನಿಖಿಲ್ ಹೊಸಮನಿ ಅವರು ಮಾತನಾಡಿ, ಈ ಮಾರಕ ಕಾಯಿಲೆಯಿಂದ ಬಚಾವಾಗಲು ಮನೆ ಮತ್ತು ಸುತ್ತಮುತ್ತಲಿನ ಪರಿಸರದಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳುವುದು, ಸೊಳ್ಳೆ ಪರದೆಗಳ ಬಳಕೆ, ಮೈತುಂಬಾ ಬಟ್ಟೆ ಧರಿಸುವುದು ಹಾಗೂ ಸೊಳ್ಳೆ ಕಡಿತದಿಂದ ರಕ್ಷಣೆ ಪಡೆಯಲು ಕೈಗೊಳ್ಳಬೇಕಾದ ಸ್ವಯಂ ರಕ್ಷಣಾ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಸಾಲಗುಂದ ಪ್ರಾಥಮಿಕ ಆರೋಗ್ಯ ಕೇಂದ್ರದ ಆಯುಷ್ ವೈದ್ಯಾಧಿಕಾರಿ ಡಾ. ಲಕ್ಷ್ಮಿ ಕನಕಿ ಅವರು ಮಾತನಾಡಿ, ಮೆದುಳು ಜ್ವರ ತಡೆಗಟ್ಟಲು 2 ವರ್ಷದ ಒಳಗಿನ ಮಕ್ಕಳಿಗೆ ಸರ್ಕಾರದಿಂದ ಉಚಿತವಾಗಿ ನೀಡಲಾಗುವ ಜೆ.ಇ. ಲಸಿಕೆಯನ್ನು (ಚುಚ್ಚುಮದ್ದು) ತಪ್ಪದೇ ಹಾಕಿಸಬೇಕು ಇದರಿಂದ ಈ ಮಾರಕ ರೋಗ ಸಂಪೂರ್ಣ ನಿಯಂತ್ರಣ ಮಾಡಬಹುದು ಎಂದು ತಿಳಿಸಿದರು. ಅಲ್ಲದೆ ರೋಗ ನಿಯಂತ್ರಣದಲ್ಲಿ ಸಮುದಾಯದ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು,

ಪ್ರತಿಯೊಬ್ಬರೂ ಪರಿಸರ ಸ್ವಚ್ಛತೆಗೆ ಆದ್ಯತೆ ನೀಡಿ ಇಲಾಖೆಯೊಂದಿಗೆ ಕೈಜೋಡಿಸಬೇಕೆಂದ ಇಲ್ಲವಾದಲ್ಲಿ ನಾವು ಮಾಡುವ ಒಂದು ನಿರ್ಲಕ್ಷ ಮಕ್ಕಳ ಜೀವದ ಮೇಲೆ ಪ್ರಭಾವ ಬೀರುತ್ತದೆ ಎಂದರು ಮತ್ತು ಎಲ್ಲಾ ಚುಚ್ಚುಮದ್ದನ್ನು ಕಡ್ಡಾಯವಾಗಿ ಹಾಕಿಸಿ ಇಲಾಖೆಗೆ ಸಹಕರಿಸಲು ಕರೆ ನೀಡಿದರು. ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಸೈಫ್ ಖಾನ್, ಹಿರಿಯ ಪಿ.ಹೆಚ್.ಸಿ.ಓ ಕಸ್ತೂರಿ ಭೈರಮಟ್ಟಿ, ಸಿಬ್ಬಂದಿ ಅಂಬಮ್ಮ ಪಿ.ಹೆಚ್.ಸಿ.ಓ, ಆಶಾ ಕಾರ್ಯಕರ್ತೆಯರಾದ ಲಕ್ಷ್ಮಿ, ಫಾತಿಮಾ, ಅನ್ನಪೂರ್ಣ, ಲಕ್ಷ್ಮಿ ಹೆಚ್., ಆಂಜನೇಯ, ಹಾಜರಾ ಬೇಗಂ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.



ಸಾಹಿತ್ಯ ಸಿಂಚನ

ಹನಿಯೊಳಗಿನ ಆಕಾಶ

ಸಣ್ಣ ಹನಿಯೊಳಗೆ ಆಕಾಶವೊಂದು ಮೂಡಿತು,
ನೀಲಿ ಕನಸೊಂದು ಮೌನವಾಗಿ ನಗಿತು.
ಮೋಡಗಳ ನೆರಳು ಅದರೊಳಗೆ ತೇಲಿತು,
ಸೂರ್ಯನ ಕಿರಣವು ಮುತ್ತಾಗಿ ಹೊಳೆಯಿತು.

ಹನಿಯ ಗಾತ್ರ ಸಣ್ಣದಾದರೂ,
ಅದರೊಳಗಿನ ಲೋಕ ಅಪಾರವಾಯಿತು.
ನಕ್ಷತ್ರಗಳ ಕನಸು ಕಣ್ಣಲ್ಲಿ ಮಿನುಗಿತು,
ಚಂದ್ರನ ಬೆಳಕು ಹನಿಯಲ್ಲಿ ಅರಳಿತು.

ಗಾಳಿಯ ಸ್ಪರ್ಶಕೆ ಹನಿಯು ನಲಿಯಿತು,
ಹಸಿರಿನ ಎಲೆಯ ಮೇಲೆ ಮುತ್ತಾಗಿ ಉಳಿಯಿತು.
ಪ್ರಕೃತಿಯ ಸೌಂದರ್ಯ ಅದರೊಳಗೆ ಕಂಡಿತು,
ಕ್ಷಣದ ಬದುಕು ಶಾಶ್ವತವೆನಿಸಿತು.

ಸಣ್ಣ ಹನಿಯೊಂದು ಹೇಳಿತು ನಿಧಾನವಾಗಿ,
“ದೊಡ್ಡ ಕನಸು ಕಾಣು” ಎಂದು ಮೌನವಾಗಿ.
ಆಕಾಶ ದೂರವಲ್ಲ, ಮನದಲ್ಲಿದೆ ಎಂದಿತು,
ಕನಸಿನ ದಾರಿಯ ಬೆಳಕನ್ನು ತೋರಿಸಿತು.

ಹನಿಯೊಳಗಿನ ಆಕಾಶದ ಅದ್ಭುತ ಲೋಕ,
ಕಣ್ಣಿಗೆ ಸಣ್ಣದು, ಭಾವನೆಗೆ ಅನಂತ.
ಒಂದು ಹನಿಯಲ್ಲೇ ವಿಶ್ವವೊಂದು ಅಡಗಿದೆ,
ಪ್ರಕೃತಿಯ ಮಡಿಲಲ್ಲಿ ಕವಿತೆಯಾಗಿ ಉಳಿದಿದೆ.

"ಗಾಂಧೀಜಿ, ಶಾಸ್ತ್ರೀಜಿಯವರ ತತ್ವಾದರ್ಶಗಳು ಸಮಾಜಕ್ಕೆ ಸದಾ ಪ್ರೇರಣೆ: ತಹಶೀಲ್ದಾರ್ ಜೂಗಲ್ ಮಂಜುನಾಯಕ"

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ: "ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಅಹಿಂಸಾ ಮಾರ್ಗ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಪ್ರಾಮಾಣಿಕತೆ ಮತ್ತು ಸರಳತೆಯ ಜೀವನ ಸಂದೇಶಗಳು ಇಂದಿನ ಸಮಾಜಕ್ಕೆ ಸದಾ ಪ್ರೇರಣಾದಾಯಕವಾಗಿವೆ" ಎಂದು ಕಂಪ್ಲಿ ತಾಲೂಕು ತಹಶೀಲ್ದಾರ್ ಜೂಗಲ್ ಮಂಜುನಾಯಕ ಅವರು ತಿಳಿಸಿದರು.



ಪಟ್ಟಣದ ತಾಲೂಕು ಆಡಳಿತ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಮಹಾತ್ಮಾ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಉಭಯ ನಾಯಕರ ಭಾವಚಿತ್ರಗಳಿಗೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು. ದೇಶದ ಸ್ವಾತಂತ್ರ್ಯ ಹಾಗೂ ಪ್ರಗತಿಗಾಗಿ ತಮ್ಮ ಇಡೀ ಜೀವನವನ್ನೇ ಮುಡುಪಾಗಿಟ್ಟ ಮಹಾನ್ ಚೇತನಗಳ ತತ್ವಾದರ್ಶಗಳನ್ನು ಪ್ರತಿಯೊಬ್ಬ ಸರ್ಕಾರಿ ಅಧಿಕಾರಿಗಳು, ನೌಕರರು ಹಾಗೂ ಸಾರ್ವಜನಿಕರು ತಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು. ಇದೇ ಸಂದರ್ಭದಲ್ಲಿ ಕಚೇರಿಯ ಸಿಬ್ಬಂದಿ ವರ್ಗದವರು ಹಾಗೂ ಸ್ಥಳೀಯ ಪ್ರಮುಖರು ಉಪಸ್ಥಿತ–ರಿದ್ದು, ಮಹಾನ್ ನಾಯಕರಿಗೆ ಗೌರವ ಸಲ್ಲಿಸಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಸಿರವಾರದಲ್ಲಿ ಗಾಂಧೀಜಿ ಜಯಂತಿ ಆಚರಣೆ: ನಾಮಫಲಕಕ್ಕೆ ಪುಷ್ಪಾರ್ಚನೆ, ಮುಖ್ಯ ರಸ್ತೆಯಲ್ಲಿ ಶ್ರಮದಾನ

❑ ನೈಜ್ಯ ದೆಸೆ ನ್ಯೂಸ್

ಸಿರವಾರ: ರಾಷ್ಟ್ರಪಿತ ಮಹಾತ್ಮ ಗಾಂಧೀ–ಜಿಯವರ ಜಯಂತಿ ಅಂಗವಾಗಿ ಸಿರವಾರ ಪಟ್ಟಣ ಪಂಚಾಯಿತಿ ವತಿಯಿಂದ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು. ಪಟ್ಟಣದ ಪೊಲೀಸ್ ಠಾಣೆಯ ಸಮೀಪವಿರುವ ಮಹಾತ್ಮ ಗಾಂಧಿ ನಗರ ಕಾಲೋನಿಯ ನಾಮಫಲಕಕ್ಕೆ ಪಟ್ಟಣ ಪಂಚಾಯಿತಿ ಅಧ್ಯಕ್ಷ ಹಾಜಿಚೌದ್ರಿ ಹಾಗೂ ಉಪಾಧ್ಯಕ್ಷೆ ಲಕ್ಷ್ಮೀ ಆದೇಪ್ಪ ಅವರು ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಮರ್ಪಿಸಿದರು.

ಈ ಮೂಲಕ ಮಹಾತ್ಮ ಗಾಂಧೀ–ಜಿಯವರ ತತ್ವ, ಆದರ್ಶ ಹಾಗೂ ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಅವರು



ನೀಡಿದ ಕೊಡುಗೆಯನ್ನು ಸ್ಮರಿಸಲಾಯಿತು. ನಂತರ ಪಟ್ಟಣದ ಮುಖ್ಯ ರಸ್ತೆಯಲ್ಲಿ ಸ್ವಚ್ಛತಾ ಶ್ರಮದಾನ ಕಾರ್ಯಕ್ರಮ ನಡೆಸಲಾಯಿತು. ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡುವುದು, ಪರಿಸರವನ್ನು ಸ್ವಚ್ಛವಾಗಿಡುವುದು ಹಾಗೂ ಸ್ವಚ್ಛತೆಯ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಶ್ರಮದಾನ ಕೈಗೊಳ್ಳಲಾಯಿತು. ಮಹಾತ್ಮ ಗಾಂಧೀಜಿಯವರು ಸ್ವಚ್ಛತೆ, ಸರಳತೆ, ಅಹಿಂಸೆ ಮತ್ತು ಸೇವೆಗೆ ಹೆಚ್ಚಿನ ಮಹತ್ವ ನೀಡಿದ್ದರು.

ಅವರ ಜಯಂತಿಯ ಸಂದರ್ಭದಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳುವ ಮೂಲಕ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಸಂದೇಶ ಸಾರಲಾಯಿತು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಜಗನ್ನಾಥ ಜೋಷಿ, ಸದಸ್ಯರಾದ ಹಸೇನ ಅಲಿಸಾಬ್, ಮಾರ್ಕಪ್ಪ, ಸೂರಿ ದುರುಗಣ್ಣ ನಾಯಕ, ಮೌಲಾಸಾಬ್ ವರ್ಚಸ್, ಮಲ್ಲಪ್ಪ, ಮಲ್ಲಿಕಾರ್ಜುನ, ಸಮುದಾಯ ಸಂಘಟನಾಧಿಕಾರಿ ಹಂಪಯ್ಯ ಪಾಟೀಲ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಹನುಮೇಶ, ಸತ್ತರಸಾಬ್ ಗುತ್ತೇದಾರ, ನಾಗರಾಜ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಖಾಸಗಿ ಕಾಲೇಜು ಆಡಳಿತ ಮಂಡಳಿ ಒಕ್ಕೂಟದಿಂದ

ಅ.3ರಂದು ಗುರುಶ್ರೇಷ್ಠ ಪ್ರಶಸ್ತಿ ಪ್ರಧಾನ ಸಮಾರಂಭ



❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಗರದ ಸತ್ಯಗಾರ್ಡನ್ ನಲ್ಲಿ ಇಂದು ತಾಲೂಕು ಖಾಸಗಿ ಕಾಲೇಜು ಆಡಳಿತ ಮಂಡಳಿಗಳ ಒಕ್ಕೂಟದಿಂದ ಗುರು ಶ್ರೇಷ್ಠ ಪ್ರಶಸ್ತಿ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಖಾಸಗಿ ಕಾಲೇಜು ಆಡಳಿತ ಮಂಡಳಿಯ ಒಕ್ಕೂಟ ಅಧ್ಯಕ್ಷ ಪರಶುರಾಮ ಮಲ್ಲಾಪುರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಪ್ರತಿ ವರ್ಷದಂತೆ ಈ ವರ್ಷವು ಕೂಡ ಶಿಕ್ಷಕರ ಹಾಗೂ ಶಿಕ್ಷಣ ಕ್ಷೇತ್ರದಲ್ಲಿನ ಸಾಧಕರನ್ನು ಗೌರವಿಸುವ ಮೂಲಕ ಅವರ ಸೇವೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಶೇಗುಣಸಿ ವಿರಕ್ತ ಮಠದ ಪರಮಪೂಜ್ಯ ಶ್ರೀಮಹಾಂತ ಸ್ವಾಮೀಜಿಗಳು ದಿವ್ಯ ಸಾನಿಧ್ಯ ವಹಿಸಲಿದ್ದು, ಪರಶುರಾಮ ಮಲ್ಲಾಪುರ ಅಧ್ಯಕ್ಷತೆ ವಹಿಸಲಿದ್ದಾರೆ.

ಶಾಸಕ ಹಂಪನಗೌಡ ಬಾದರ್ಲಿ, ಮಾಜಿ ಸಂಸದ ಕೆ. ವಿರುಪಾಕ್ಷಪ್ಪ, ಮಾಜಿ ಸಚಿವ ವೆಂಕಟರಾವ್ ನಾಡಗೌಡ, ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ, ಎಂ.ದೊಡ್ಡ ಬಸವರಾಜ, ಸೋಮನಗೌಡ ಬಾದರ್ಲಿ, ಡಾ.ಚನ್ನನಗೌಡ, ಆರ್.ಸಿ.ಪಾಟೀಲ್, ಪಿ.ವಿಷ್ಣುವರ್ಧನರೆಡ್ಡಿ ಸೇರಿದಂತೆ ಇನ್ನಿತರೆ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಿ ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಹಾಗೂ ಮಕ್ಕಳ ಆಯೋಗ ಸದಸ್ಯರಾದ ಎನ್.ಸತ್ಯನಾರಾಯಣ ಶ್ರೇಷ್ಠಿ ಅವರಿಗೆ ವಿಶೇಷ ಸನ್ಮಾನ ನೆರವೇರಿಸಲಾಗುವುದು ಎಂದರು. ತಾಲೂಕು ಖಾಸಗಿ ಕಾಲೇಜು ಆಡಳಿತ ಮಂಡಳಿ ಒಕ್ಕೂಟದ ಉಪಾಧ್ಯಕ್ಷ ಇರ್ಫಾನ್, ಶಶಿಧರಸ್ವಾಮಿ ಹಿರೇಮಠ, ಕಾರ್ಯದರ್ಶಿ ತಿಮ್ಮಣ್ಣನಾಯಕ, ಖಜಾಂಚಿ ವೆಂಕಟರಾವ್, ಗೌರವ ಸಲಹೆಗಾರ ಅನಿಲ್ ಕುಮಾರ, ಜಂಟಿ ಕಾರ್ಯದರ್ಶಿ ಸುರೇಶರೆಡ್ಡಿ, ಇದ್ದರು.

ಜ್ಞಾನೇಶ್ ಕುಮಾರ್ ರಾಜಿನಾಮೆಗೆ ಆಗ್ರಹಿಸಿ ಪ್ರತಿಭಟನೆ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಮತದಾರರ ವಿರೋಧಿ ಎಸ್ಐಆರ್ ಜಾರಿಗೆ ಕಾರಣರಾಗಿರುವ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಕೂಡಲೇ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ಎಸ್ಐಆರ್ ಜಾಗೃತಿ ವೇದಿಕೆ ವತಿಯಿಂದ ನಗರದ ಮಹಾತ್ಮಗಾಂಧಿ ಸರ್ಕಲ್‌ನಲ್ಲಿ ಅ.2 ಶುಕ್ರವಾರದಂದು ಪ್ರತಿಭಟನೆ ನಡೆಸಲಾಯಿತು.

ಎಸ್ಐಆರ್ ಹೆಸರಲ್ಲಿ ಆದಿವಾಸಿ, ದಲಿತ, ಮುಸ್ಲಿಂ ಸೇರಿದಂತೆ ಶೋಷಿತ ಸಮುದಾಯಗಳ ಜನವರ್ಗದ ಹೆಸರಗಳನ್ನು ಅವರ ಹಕ್ಕಿನ ಮತದಾನದ ಪಟ್ಟಿಯಿಂದ ಹೊರಗಿಡಲಾಗುತ್ತಿದೆ. ಚುನಾವಣಾ ಆಯೋಗ ಬಿಜೆಪಿ ಪಕ್ಷದ ಕೈಗೊಂಬೆಯಂತೆ ವರ್ತಿಸುತ್ತಿದ್ದು, ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಆಶಯಗಳನ್ನು ಬುಡಮೇಲು ಮಾಡಲು ಹೊರಟಿದೆ ಎಂದು ಪ್ರತಿಭಟನಾನಿರತರು ಆಕ್ರೋಶ ವ್ಯಕ್ತಪಡಿಸಿದರು. ವೇದಿಕೆಯ ಸಂಚಾಲಕ ಚಂದ್ರಶೇಖರ ಗೋರೇಬಾಳ ಮಾತನಾಡಿ, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಒಬ್ಬೊಬ್ಬ ವ್ಯಕ್ತಿ ನೂರಾರು ಫಾರಂ ನಂ.7 ನೀಡಿ, ನಿರ್ದಿಷ್ಟ



ಸಮುದಾಯದ ಮತದಾರರ ನೋಂದಣಿಯನ್ನು ರದ್ದುಗೊಳಿಸಲು ಸಂಚು ನಡೆಸಿರುವುದು ಈಗಾಗಲೇ ಬಯಲಾಗಿದೆ. ಚುನಾವಣಾ ಆಯೋಗದ ಲೋಪಗಳು ಮೇಲಿಂದ ಮೇಲೆ ಒಂದೊಂದಾಗಿ ಹೊರಬೀಳುತ್ತಿವೆ.

ಎಸ್ಐಆರ್ ಹೆಸರಿನಲ್ಲಿ ಅರ್ಹ ಮತದಾರರನ್ನು ಹೊರಗಿಟ್ಟು ಚುನಾವಣೆ ನಡೆಸುತ್ತಿರುವುದು ಆಘಾತಕಾರಿ ಬೆಳವಣಿಗೆಯಾಗಿದ್ದು, ಜನರು ಬೀದಿಗಿಳಿದು ಹೋರಾಟ ನಡೆಸುವ ದಿನಗಳು ದೂರವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ದೇಶದ ಎಲ್ಲ ರಾಜ್ಯಗಳಲ್ಲಿ ಜನವರಿ 2025ರ ಮತದಾರರ ಪಟ್ಟಿಯನ್ನು ಮುಂದುವರಿಸಬೇಕು, ಜ್ಞಾನೇಶ್ ಕುಮಾರ್ ದೇಶದ್ರೋಹಿ ಕೃತ್ಯವನ್ನು ಸಮರ್ಥಿಸಲು ಆರ್‌ಎಸ್‌ಎಸ್–ಬಿಜೆಪಿಗಳನ್ನು ದೇಶದ ಜನರು ಬಹಿಷ್ಕರಿಸಬೇಕು. ಮೋದಿ ಸರ್ಕಾರದ ಏಜೆಂಟ್ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಕೂಡಲೇ ರಾಜೀನಾಮೆ ಕೊಡಬೇಕು, ಸುಪ್ರೀಂಕೋರ್ಟ್ ಸಂವಿಧಾನದ 142ನೇ ವಿಧಿಯನ್ನು ಬಳಸಿ ಸಿಇಸಿ ಜ್ಞಾನೇಶ್ ಕುಮಾರ್ ಅವರ ವಿರುದ್ಧ ದೇಶದ್ರೋಹ ಮೊಕದ್ದಮೆ ಹೂಡಬೇಕು, ತಕ್ಷಣ ಎಸ್ಐಆರ್ ರದ್ದುಪಡಿಸಿ, ಎಸ್ಐಆರ್ ಪ್ರಕ್ರಿಯೆಯಲ್ಲಿ ತಗೆದುಕೊಂಡ ತೀರ್ಮಾನಗಳನ್ನು ಸ್ವತಂತ್ರ ತನಿಖೆಗೊಳಪಡಿಸಬೇಕು,

ಜ್ಞಾನೇಶ್ ಕುಮಾರ ನೇತೃತ್ವದಲ್ಲಿ ನಡೆದ ಎಲ್ಲಾ ಚುನಾವಣೆಗಳನ್ನು ರದ್ದುಪಡಿಸಬೇಕು, ಚುನಾವಣೆ ಆಯುಕ್ತರನ್ನು ಕೇಂದ್ರ ಸರಕಾರವೇ ನೇಮಕ ಮಾಡುವ ಮತ್ತು ಆಯುಕ್ತರಿಗೆ ನಿವೃತ್ತಿಯ ನಂತರವೂ ಕಾನೂನು ಕ್ರಮದಿಂದ ರಕ್ಷಣೆ ಒದಗಿಸುವ 2023ರ ತಿದ್ದುಪಡಿ ಕಾಯಿದೆಯನ್ನು ರದ್ದು ಗೊಳಿಸಬೇಕು ಎಂದು ಆಗ್ರಹಿಸಲಾಯಿತು. ಈ ಪ್ರತಿಭಟನೆ ಸಂದರ್ಭದಲ್ಲಿ ಭಾಷುಮಿಯಾ, ಎಸ್. ದೇವೇಂದ್ರಗೌಡ, ಚಂದ್ರಶೇಖರ ಕ್ಯಾತ್ನಟ್ಟಿ, ಶಂಕರ ಗುರಿಕಾರ, ಕೃಷ್ಣಮೂರ್ತಿ ಧುಮತಿ, ಗಂಗಮ್ಮ ಗೋರೇಬಾಳ, ಜಗದೀಶ ಸುಕಾಲಪೇಟೆ, ಮ–ರಿಯಪ್ಪ ಸುಕಾಲಪೇಟೆ, ಯಮನಮ್ಮ ಸಿಂಧನೂರು, ಸುಲೋಚನಾ, ಆರೋಗ್ಯಮ್ಮ, ಗೌರಮ್ಮ ಗೋರೇಬಾಳ, ರತ್ನಾ ದೇವರಗುಡಿ ಸೇರಿದಂತೆ ಇನ್ನಿತರರು ಇದ್ದರು.

ರಾಜ್ಯಮಟ್ಟಕ್ಕೆ ಉದ್ಬಾಳ ಪಿ.ಎಂ.ಶ್ರೀ ಪ್ರೌಢಶಾಲೆಯ ಮೂವರು ವಿದ್ಯಾರ್ಥಿನಿಯರು

ಎತ್ತರ ಜಿಗಿತದಲ್ಲಿ ಸಂಗೀತಾಗೆ ಪ್ರಥಮ, ಚಕ್ರ ಎಸೆತ ಮತ್ತು ಗುಂಡು ಎಸೆತದಲ್ಲಿ ವರ್ಷಾ, ತನುಶ್ರೀಗೆ ದ್ವಿತೀಯ ಸ್ಥಾನ

❑ ನೈಜ್ಯ ದೆಸೆ ನ್ಯೂಸ್

ಮಸ್ಕಿ: ರಾಯಚೂರಿನ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ನಡೆದ ಪ್ರೌಢಶಾಲಾ ವಿದ್ಯಾರ್ಥಿಗಳ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಮಸ್ಕಿ ತಾಲೂಕಿನ ಉದ್ಬಾಳ (ಯು) ಗ್ರಾಮದ ಪಿ.ಎಂ.ಶ್ರೀ ಪ್ರೌಢಶಾಲೆಯ ಮೂವರು ವಿದ್ಯಾರ್ಥಿನಿಯರು ಅತ್ಯುತ್ತಮ ಸಾಧನೆ ಮಾಡಿ ರಾಜ್ಯಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಮಸ್ಕಿ ತಾಲೂಕಿನ ಉದ್ಬಾಳ್ ಗ್ರಾಮದ ಪಿ.ಎಂ.ಶ್ರೀ ಪ್ರೌಢಶಾಲೆಯ ಶಾಲೆಯ ವಿದ್ಯಾರ್ಥಿನಿ ಕುಮಾರಿ ಸಂಗೀತಾ



(ಕರಿಯಪ್ಪ ಅವರ ಪುತ್ರಿ) ಎತ್ತರ ಜಿಗಿತ ಸ್ಪರ್ಧೆಯಲ್ಲಿ ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಕುಮಾರಿ ವರ್ಷಾ (ಪಂಪಣ್ಣ ಅವರ ಪುತ್ರಿ) ಚಕ್ರ ಎಸೆತ ಸ್ಪರ್ಧೆಯಲ್ಲಿ ಹಾಗೂ ಕುಮಾರಿ ತನುಶ್ರೀ (ಶರಣಪ್ಪ ಅವರ ಪುತ್ರಿ) ಗುಂಡು ಎಸೆತ ಸ್ಪರ್ಧೆಯಲ್ಲಿ ಜಿಲ್ಲಾ ಮಟ್ಟದಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟದ ಕ್ರೀಡಾಕೂಟಕ್ಕೆ ಅರ್ಹತೆ ಗಳಿಸಿದ್ದಾರೆ.

ಗ್ರಾಮೀಣ ಭಾಗದ ವಿದ್ಯಾರ್ಥಿನಿಯರು ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಗಮನಾರ್ಹ ಸಾಧನೆ ಮಾಡಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುವುದು ಶಾಲೆ ಹಾಗೂ ಗ್ರಾಮದಲ್ಲಿ ಸಂತಸ ಮೂಡಿಸಿದೆ. ಮೂವರು ವಿದ್ಯಾರ್ಥಿನಿಯರ ಸಾಧನೆಗೆ ಶಾಲೆಯ ಮುಖ್ಯಗುರು ಆದಪ್ಪ ಹೆಂಬಾ ಹರ್ಷ ವ್ಯಕ್ತಪಡಿಸಿದ್ದು, ರಾಜ್ಯಮಟ್ಟದ ಕ್ರೀಡಾಕೂಟದಲ್ಲಿಯೂ ಉತ್ತಮ ಪ್ರದರ್ಶನ ನೀಡಿ ಇನ್ನಷ್ಟು ಸಾಧನೆ ಮಾಡಲಿ ಎಂದು ಹಾರೈಸಿದ್ದಾರೆ. ವಿದ್ಯಾರ್ಥಿನಿಯರ ಸಾಧನೆಗೆ ಶಾಲೆಯ ಶಿಕ್ಷಕರು, ಸಿಬ್ಬಂದಿ, ಗ್ರಾಮಸ್ಥರು ಹಾಗೂ ಗ್ರಾಮದ ಹಿರಿಯರು ಅಭಿನಂದನೆ ಸಲ್ಲಿಸಿ, ರಾಜ್ಯಮಟ್ಟದಲ್ಲಿಯೂ ಜಿಲ್ಲೆಗೆ ಕೀರ್ತಿ ತರಲಿ ಎಂದು ಶುಭ ಹಾರೈಸಿದ್ದಾರೆ.

ಖಾಸ್ಗತ ಶಿವಯೋಗಿಗಳ ಹಾಗೂ ವಿರಕ್ತಶ್ರೀಗಳ ಪುಣ್ಯ ಸ್ಮರಣೋತ್ಸವ

❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟೆ: ಮಹಾತ್ಮರ, ಸಂತರ ಸ್ಮರಣೆಯಿಂದ ಜೀವನ ಪಾವನವಾಗುತ್ತದೆ ಈ ನೆಲವನ್ನು ಪಾವನ, ಪುಣ್ಯಕ್ಷೇತ್ರವಾಗಿಸಿದವರು ಖಾಸ್ಗತ–ವಿರಕ್ತ ಸ್ವಾಮೀ–ಜಿಗಳು, ಎಂದು ಕೊಡೇಕಲ್ಲ ದುರುದುಂಡೇಶ್ವರ ಮಠದ ಶಿವಕುಮಾರ ಸ್ವಾಮೀಜಿ ಹೇಳಖಿದರು

ಅವರು ಪಟ್ಟಣದ ಖಾಸ್ಗತೇಶ್ವರಮಠ ಶ್ರೀ ಗುರು ಭಿಕ್ಷೇಶ್ವರ ಸಭಾಮಂಟಪದಲ್ಲಿ ಖಾಸ್ಗತ ಶಿವಯೋಗಿಗಳ 130ನೆಯ ಹಾಗೂ ಹಾಗೂ ವಿರಕ್ತ ಸ್ವಾಮೀಜಿಯವರ 12ನೆಯ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಗುರುವಾರ ಸಂಜೆ ಮಾತನಾಡಿದರು. ಶಿವ ಬಸವ ಸ್ವಾಮೀಜಿಗಳು,. ಸಂಗೀತದ ಸಂಕಲ್ಪವನ್ನು ಸಾಕಾರಗೊಳಿಸಿದರು. ಶಿಕ್ಷಣ ಕ್ಷೇತ್ರ ಬಲಗೊಳಿಸಿದರು. ನಾಡಿನಲ್ಲಿ ಸಿದ್ಧಗಂಗಾಮಠ, ಗವಿಮಠದ ನಂತರ ಖಾಸ್ಗತಮಠವು ಈ ಸಾಧನೆಯ ಶಿಖರ ತಲುಪಿದೆ ಎಂದರು, ಮುಖ್ಯ ಅತಿಥಿಗಳಾಗಿದ್ದ ಎಸ್.ಕೆ.



ಪ್ರೌಢಶಾಲೆಯ ಉಪಪ್ರಾಚಾರ್ಯ ಅನೀಲಕುಮಾರ. ಬ. ಇರಾಜ ಮಾತನಾಡಿ, ಹುಬ್ಬಳ್ಳಿಯ ಸಿದ್ಧಾರೂಢರ ಪರಮ ಶಿಷ್ಯರಾಗಿದ್ದ ಖಾಸ್ಗತ ಶಿವಯೋಗಿಗಳ ನಿಷ್ಠೆ, ಶಿವ ಯೋಗ ಸಾಧನೆ ಕಂಡು ಖಾಸ್ಗತ ಎಂದು ಹೆಸರು ಕೊಟ್ಟರು, ಮಠದ ಕುಳಿತಿರದೆ ಸಮಾಜದ ಬಡ ಮತ್ತು ನೊಂದ ಜನರ ನೋವುಗಳನ್ನು ಅರಿತು ಅವರಿಗೆ ಸಹಾಯಮಾಡಿದರು ಎಂದರು.

ಸಾನಿಧ್ಯವನ್ನು ವಹಿಸಿದ್ದ , ವಡವಡಗಿ ನಂದಿಮಠದ ವೀರಸಿದ್ದ ಸ್ವಾಮೀಜಿ, ಗುಳಬಾಳ ರಾಮಲಿಂಗೇಶ್ವರಮಠದ ಮರಿಹುಚ್ಚೇಶ್ವರ ಸ್ವಾಮೀಜಿ, ಹಿರೇಮಠ ಕೊಟ್ಟಡಗಿಯ ಪ್ರವಚನಕಾರ ವೇ. ಮೂ. ರಾಚಯ್ಯ ಶಾಸ್ತ್ರಿ ಮಾತನಾಡಿದರು..

ವಿರಕ್ತ ಶ್ರೀ ಪ್ರಶಸ್ತಿ : ತಬಲಾ ವಾದಕ ಶಿವಾನಂದ ಹೂಗಾರ ಇವಣಗಿ, ಗಾಯಕರಾದ ಸುಭಾಸ ದಾಸರ ಮುದ್ದೇಬಿಹಾಳ, ಸರೋಜನಿ ಮಾಡಬಾಳ ನಿಡಗುಂದಿ, ಗುಂಡಣ್ಣ ಸಿದ್ದಪ್ಪ ತಾಳಿಕೋಟೆ, ನಿವೃತ್ತ ಮುಖ್ಯಶಿಕ್ಷಕ ಪರಶುರಾದು ಭೀಮಪ್ಪ ಗುಬ್ಬೇವಾಡ, ಸಂಗೀತ ಶಿಕ್ಷಕ ಲಕ್ಷ್ಮಣಸಿಂಗ ಅಣ್ಣುಸಿಂಗ ಬಿಜಾಪೂರ ತಾಳಿಕೋಟೆ. ಇವರೆಲ್ಲರಿಗೂ "ವಿರಕ್ತ ಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ಕರ್ನಾಟಕ ಸೌಂಡ ಸಿಸ್ಟಂ ನ ಮಹಮ್ಮದ ಹರ್ಷದ ಅತ್ತಾರ ಹಾಗೂ ಎಸ್.ಕೆ.ಸ್ಟುಡಿಯೋ ಛಾಯಾಗ್ರಾಹಕ ರಾಜು ಅಲ್ಲಾಪುರ ಅವರುಗಳಿಗೆ ಅವರ ಸೇವೆಗೆ ವಿಶೇಷ ಸನ್ಮಾನ ಮಾಡಲಾಯಿತು.

ಸಂಗೀತ ಸಂಜೆ ಕಾರ್ಯಕ್ರಮ: ರಾತ್ರಿ 9–00 ಗಂಟೆಗೆ ನಡೆದ ಸಂಗೀತ ಕಾರ್ಯಕ್ರಮವನ್ನು : ಸಾನಿಧ್ಯವನ್ನು ಹಿರೇಮಠ ಕೊಟ್ಟಡಗಿಯ ಪ್ರವಚನಕಾರ ವೇ.ಮೂ. ರಾಚಯ್ಯ ಶಾಸ್ತ್ರಿ, ವಹಿಸಿದ್ದರು. .

ಏವೂರನ ನಿವೃತ್ತ ಸಂಗೀತ ಶಿಕ್ಷಕ ಪಂಡಿತ ಮಲ್ಲಿಕಾರ್ಜುನ ಭಜಂತ್ರಿ ಸಂಗೀತ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಕೆಂಭಾವಿ ಸಂಗೀತ ಶಿಕ್ಷಕ ಪಂಡಿತ ಬಸವರಾಜ ಭಂಟನೂರ ,ನಿವೃತ್ತ ಶಿಕ್ಷಣಾಧಿಕಾರಿ ಕಾಶೀನಾಥ, ಪಿ. ಸಾಲಿಮಠ ಅವರು ಮಾತನಾಡಿ, ಖಾಸ್ಗತಮಠದಲ್ಲಿ ತೆರೆದಿರುವ ಸಂಗೀತ ಮಹಾ ವಿದ್ಯಾಯದ ಕುಡಿಗಳೀಗ ಉತ್ತರ ಕರ್ನಾಟಕದ ಹೆಚ್ಚಿನೆಡೆ ಸಂಗೀತ ಸುಧೆಯನ್ನು ಉಣಬಡಿಸುತ್ತಿದ್ದಾರೆ ಎಂದರು.

ಸಂಗೀತ ಶಿಕ್ಷಕ ಈಶ್ವರ ಬಡಿಗೇರ (ಬಸಾಲವಾಡಗಿ) ಹುಣಸಗಿ, ಉಪಸ್ಥಿತರಿದ್ದರು. ವಿಶೇಷ ಕಲಾವಿದರು: ಖ್ಯಾತ ಹಿಂದುಸ್ತಾನಿ ಶಾಸ್ತ್ರೀಯ ಸಂಗೀತ ಗಾಯಕರಾದ ಬಸವರಾಜ ವಂದಲಿ ಹಾಗೂ ವಿಭಾ ಹೆಗಡೆ ಬೆಂಗಳೂರು, ಬೆಂಗಳೂ–ರಿನ ತಬಲಾವಾದಕ ಅಕ್ಷಯ ಜೋಶಿ(ಲಿಂಗಸೂರು) ಸೇರಿದಂತೆ ನೂರಾರು ಕಲಾವಿದರುಗಳು ಸಂಗೀತ ಸಂಜೆಯನ್ನು ನಡೆಸಿಕೊಟ್ಟರು.

ನೇಮಕಾತಿ ಪ್ರಕಟಣೆ

KFD ನೇಮಕಾತಿ 2026 – 750 ಅರಣ್ಯ ವೀಕ್ಷಕ (Forest Observer) ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಅಕ್ಟೋಬರ್ 1, 2026

KFD ನೇಮಕಾತಿ 2026: 750 ಅರಣ್ಯ ವೀಕ್ಷಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಅರಣ್ಯ ಇಲಾಖೆಯು ಜುಲೈ 2026ರ ಅಧಿಕೃತ ಅಧಿಸೂಚನೆಯ ಮೂಲಕ ಅರಣ್ಯ ವೀಕ್ಷಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 07 ಸೆಪ್ಟೆಂಬರ್ 2026 ರೊಳಗೆ (ಅಂತಿಮ ದಿನಾಂಕವನ್ನು 30–10–2026 ರವರೆಗೆ ವಿಸ್ತರಿಸಲಾಗಿದೆ) ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: aranya.gov.in

ತಾಂಡವಪುರ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಮಹಾತ್ಮ ಗಾಂಧೀಜಿ ಜಯಂತಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ತಾಂಡವಪುರ ಅಕ್ಟೋಬರ್ 2 ಮೈಸೂರು ಜಿಲ್ಲೆ, ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ತಾಂಡವಪುರ ಗ್ರಾಮ ಪಂಚಾಯತಿ ಕಚೇರಿಯಲ್ಲಿ 157ನೇ



ಮಹಾತ್ಮ ಗಾಂಧೀಜಿಯವರ ಜಯಂತಿಯನ್ನು ಆಚರಿಸಲಾಯಿತು ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿ ಪ್ರಕಾಶ್ ಕಾರ್ಯದರ್ಶಿ ಕೆಕೆ ಮರೆಯ ಲೆಕ್ಕಸಹಾಯಕ ಎಸ್ ಪುಟ್ಟರಾಜು ರವರು ಮಹಾತ್ಮ ಗಾಂಧೀಜಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ವಂದಿಸಿ ಗೌರವ ಸಲ್ಲಿಸಿದರು ಈ ಜಯಂತಿ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪ್ರಕಾಶ್ ಕಾರ್ಯದರ್ಶಿ ಕೆ ಕೆ ಮರಯ್ಯಲೆಕ್ಕ ಸಹಾಯಕ ಎಸ್ ಪುಟ್ಟರಾಜು ಗ್ರಾಮ ಪಂಚಾಯಿತಿಯ ಸಿಬ್ಬಂದಿ ವರ್ಗದ ನಂಜಪ್ಪ ಶ್ರೀಕಂಠ ಗ್ರಂಥಾಲಯ ಚಂದ್ರು ಶಾಂತ ಹಾಗೂ ಪೌರಕಾರ್ಮಿಕರು ಕೂಸಿನ ಮನೆಯ ಕಾರ್ಯಕರ್ತರು ಮುಂತಾದವರು ಈ ಸಂದರ್ಭದಲ್ಲಿ ಹಾಜರಿದ್ದು ಮಹಾತ್ಮ ಗಾಂಧೀಜಿ ಅವರಿಗೆ ನಮನ ಸಲ್ಲಿಸಿದರು

ಕಂಪ್ಲಿಯಲ್ಲಿ ಅಕ್ಟೋಬರ್ 4 ರಿಂದ 'ಗಂಡುಗಲಿ ಕುಮಾರ ರಾಮ ವೈಭವ'ದ ಸಾಂಸ್ಕೃತಿಕ ಧಮಾಕಾ! ಶಾಮಿಯಾನ್, ಸೌಂಡ್ & ಲೈಟಿಂಗ್ ಸಂಘಟನೆಯಿಂದ ತಾಲೂಕು ಮಟ್ಟದ 3ನೇ ಮಹಾ ಅಧಿವೇಶನದ ಬೃಹತ್ ಸಂಭ್ರಮ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಕೋಟೆ ನಗರಿ ಕಂಪ್ಲಿಯಲ್ಲಿ ಇದೇ ಅಕ್ಟೋಬರ್ 4 ಮತ್ತು 5 ರಂದು ಇತಿಹಾಸ ಪ್ರಸಿದ್ಧ 'ಗಂಡುಗಲಿ ಕುಮಾರ ರಾಮ ವೈಭವ – 2026' ಮತ್ತು ತಾಲೂಕು ಮಟ್ಟದ 3ನೇ ಮಹಾ ಅಧಿವೇಶನದ ಮಹಾ ಸಂಗಮ ಜರುಗಲಿದ್ದು, ಕಂಪ್ಲಿ ನಗರವು ಸಾಂಸ್ಕೃತಿಕ ಕಳೆಯನ್ನು ಪಡೆದುಕೊಳ್ಳುತ್ತಿದೆ.



ಬಳ್ಳಾರಿ ಜಿಲ್ಲೆಯ ಕಂಪ್ಲಿ ತಾಲೂಕು ಶಾಮಿಯಾನ್ ಡೆಕೋರೇಷನ್, ಧ್ವನಿ ಮತ್ತು ಬೆಳಕು ಕ್ಷೇಮಾಭಿವೃದ್ಧಿ ಸಂಘದ (ರಿ) ನೇತೃತ್ವದಲ್ಲಿ ಈ ವೈಭವದ ಆಮಂತ್ರಣ ಪತ್ರಿಕೆ ಈಗಾಗಲೇ ಬಿಡುಗಡೆಯಾಗಿದ್ದು, ಸಾರ್ವಜನಿಕರಲ್ಲಿ ಭಾರಿ ಕುತೂಹಲ ಮೂಡಿಸಿದೆ. ಕಣ್ಮನ ಸೆಳೆಯಲಿರುವ ದೃಶ್ಯ ವೈಭವದ ಮಹಾದ್ವಾರದ ಕಮಾನು : ಕಾರ್ಯಕ್ರಮದುದ್ದಕ್ಕೂ ಅತ್ಯಾಧುನಿಕ ಧ್ವನಿ ಮತ್ತು ಅದ್ಭುತ ಬೆಳಕಿನ (Sound & Light) ವಿಶಿಷ್ಟ ಸಂಯೋಜನೆ ಇರಲಿದ್ದು, ಕಂಪ್ಲಿಯ ಹಬ್ಬದ ವಾತಾವರಣಕ್ಕೆ ಡಿಜಿಟಲ್ ಸ್ಪರ್ಶ ಸಿಗಲಿದೆ. ತಾಲೂಕಿನ ಕಲೆ, ಸಂಸ್ಕೃತಿ ಮತ್ತು ವೃತ್ತಿಪರರ ಬದುಕಿನ ಹಿತರಕ್ಷಣೆಯನ್ನು ಸಾರುವ ನಿಟ್ಟಿನಲ್ಲಿ ಈ ಮಹಾ ವೇದಿಕೆ ಸಜ್ಜಾಗುತ್ತಿದೆ. ಎರಡು ದಿನಗಳ ಮಹಾ ಸಂಭ್ರಮದ ವಿವರ: * ದಿನಾಂಕ: 04–10–2026 (ಭಾನುವಾರ) ಮತ್ತು 05–10–2026 (ಸೋಮವಾರ) * ಸ್ಥಳ: ಶ್ರೀ ವೀರಶೈವ ಭವನ (ವಾರದ ಸಂತೆ ಮಾರ್ಕೆಟ್ ಹತ್ತಿರ, ಕಂಪ್ಲಿ) "ನಮ್ಮ ತಾಲೂಕಿನ ಸಾಂಸ್ಕೃತಿಕ ಅಸ್ಮಿತೆಯನ್ನು ಎತ್ತಿ ಹಿಡಿಯುವ ಹಾಗೂ ಸಂಘಟನೆಯ ಶಕ್ತಿಯನ್ನು ಜಗತ್ತಿಗೆ ಪರಿಚಯಿಸುವ ನಿಟ್ಟಿನಲ್ಲಿ ಈ 3ನೇ ಮಹಾ ಅಧಿವೇಶನ ಮೈಲಿಗಲ್ಲಾಗಲಿದೆ. ಕಂಪ್ಲಿ ಜನತೆ ಸೌಂಡ್ ಮತ್ತು ಲೈಟಿಂಗ್ಸ್‌ನ ಈ ಅಭೂತಪೂರ್ವ ರಂಗು–ರಂಗಿನ ಹಬ್ಬಕ್ಕೆ ಸಾಕ್ಷಿಯಾಗಬೇಕು." ಎಂದು ಸಂಘದ ಆಯೋಜಕರು ತಿಳಿಸಿದ್ದಾರೆ. ಸ್ಥಳೀಯ ಧಾರ್ಮಿಕ ಕೇಂದ್ರಗಳಾದ ಶ್ರೀ ಸೋಮೇಶ್ವರ ದೇವಸ್ಥಾನ, ಶ್ರೀ ಪೇಟೆ ಬಸವೇಶ್ವರ ದೇವಸ್ಥಾನ ಹಾಗೂ ಸೈಯದ್ ಮುಸ್ತಫ ಖಾದ್ರಿ ದರ್ಗಾ, ಹಾಗೂ ಚರ್ಚ್ ಸೌಹಾರ್ದತೆಯ ನೆರಳಿನಲ್ಲಿ ನಡೆಯುತ್ತಿರುವ ಈ ಸಾಂಸ್ಕೃತಿಕ ಹಬ್ಬಕ್ಕೆ ನಾಡಿನ ಪ್ರಮುಖ ಗಣ್ಯರು ಸಾಕ್ಷಿಯಾಗಲಿದ್ದಾರೆ. ವೃತ್ತಿ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕೋರಲಾಗಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಆದರ್ಶ ನಾಯಕರ ತತ್ವಗಳು ವಿದ್ಯಾರ್ಥಿ ಜೀವನಕ್ಕೆ ದಾರಿದೀಪ: ನಿವೃತ್ತ ಶಿಕ್ಷಕ ಫಣಿ ಸೋಮಪ್ಪ ಕರೆ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಸಮೀಪದ ಕೋಟೆ ಪ್ರದೇಶದಲ್ಲಿರುವ ಶ್ರೀ ಸ್ವಾಮಿ ವಿವೇಕಾನಂದ ಶಾಲೆಯಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ದೇಶದ ಹೆಮ್ಮೆಯ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿಜಿ ಅವರ ಜಯಂತಿಯನ್ನು ಅತ್ಯಂತ ಶ್ರದ್ಧಾಭಕ್ತಿ ಹಾಗೂ ಸಡಗರದಿಂದ ಆಚರಿಸಲಾಯಿತು.



ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನಿವೃತ್ತ ಶಿಕ್ಷಕರಾದ ಫಣಿ ಸೋಮಪ್ಪ ರವರು ಮಹನೀಯರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು. 'ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹಾತ್ಮ ಗಾಂಧೀಜಿ ಅವರ ಅಹಿಂಸಾ ತತ್ವ ಹಾಗೂ "ಜೈ ಜವಾನ್, ಜೈ ಕಿಸಾನ್" ಘೋಷಣೆಯ ಮೂಲಕ ದೇಶದ ಸ್ವಾಭಿಮಾನ ಎತ್ತಿಹಿಡಿದ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಸರಳತೆ, ಪ್ರಾಮಾಣಿಕತೆ ಮತ್ತು ದೇಶಪ್ರೇಮದ ಆದರ್ಶಗಳು ಇಂದಿನ ತಲೆಮಾರಿಗೆ ಅತ್ಯಂತ ಪ್ರಸ್ತುತವಾಗಿವೆ.

ವಿದ್ಯಾರ್ಥಿಗಳು ಕೇವಲ ಅಂಕ ಗಳಿಕೆಗೆ ಸೀಮಿತವಾಗದೆ, ಇಂತಹ ಮಹಾನ್ ನಾಯಕರ ನೈತಿಕ ಮೌಲ್ಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ದೇಶದ ಉತ್ತಮ ಪ್ರಜೆಗಳಾಗಬೇಕು' ಎಂದು ಕರೆ ನೀಡಿದರು. ಸಿವಿ ರಾಮನ್ ಸಂಸ್ಥೆಯ ಸಂಸ್ಥಾಪಕರಾದ ಎಚ್.ಸಿ. ರಾಮಕೃಷ್ಣ ಅವರು ಮಾತನಾಡಿ, ಶಾಲಾ ಹಂತದಲ್ಲೇ ಮಹನೀಯರ ಆದರ್ಶಗಳನ್ನು ನೆನಪಿಸುವ ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ದೇಶಭಕ್ತಿಯನ್ನು ಜಾಗೃತಗೊಳಿಸುತ್ತವೆ ಎಂದರು. ಶಾಲೆಯ ಮುಖ್ಯಗುರುಗಳಾದ ಬಿ. ಜಿಲಾನ್ ಸಾಬ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಂದ ದೇಶಭಕ್ತಿ ಗೀತೆಗಳ ಗಾಯನ ಹಾಗೂ ಮಹನೀಯರ ಜೀವನ ಕುರಿತು ಕಿರು ಭಾಷಣ ಸ್ಪರ್ಧೆಗಳು ನಡೆದವು. ಕಾರ್ಯಕ್ರಮದಲ್ಲಿ ಶಾಲೆಯ ಸಹ ಶಿಕ್ಷಕಿಯರಾದ ಫಣಿ ಅಮೃತ, ಕೊಲ್ಕರ್ ಜಯಶ್ರೀ, ಖಾಜಬನಿ, ಡಿ. ಉಮಾ ಹಾಗೂ ಶಾಲೆಯ ಸಹಾಯಕಿ ಶರ್ಮಸ್ ಬೀ ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ಮತ್ತು ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಶಾಲೆಯ ಸಹ ಶಿಕ್ಷಕಿ ಕೆ. ಶ್ವೇತಾ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಭಾರತ ಶ್ರೇಷ್ಠ ಗುರು ಪರಂಪರೆ ಹೊಂದಿದ ದೇಶ: ದಮ್ಮೂರಮಠ

❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಈ ಜಗತ್ತಿಗೆ ಗುರುವಿನ ಸ್ಥಾನಮಾನ ಹಾಗೂ ಶ್ರೇಷ್ಠತೆಯನ್ನು ಪರಿಚಯಿಸಿದ ದೇಶ ಭಾರತ, ಭಾರತೀಯ ಸಂಸ್ಕೃತಿಯಲ್ಲಿ ಗುರುವಿಗೆ ಪವಿತ್ರ ಸ್ಥಾನವನ್ನು ನೀಡಲಾಗಿದೆ ಎಂದು ಸಾಹಿತಿ,

ಮುದ್ದೇಬಿಹಾಳ ಕ್ಷೇತ್ರ ಸಮನ್ವಯ ಅಧಿಕಾರಿ ಆರ್.ಬಿ. ದಮ್ಮೂರಮಠ ಹೇಳಿದರು. ಗುರುವಾರ ಸಂಜೆ ಪಟ್ಟಣದ ಪ್ರತಿಷ್ಠಿತ ವಿವಿ ಸಂಘದ ಶ್ರೀ ಖಾಸ್ಗತೇಶ್ವರ ಶಿಕ್ಷಣ ಮಹಾವಿದ್ಯಾಲಯದ ವಾರ್ಷಿಕ ಸ್ನೇಹ ಸಮ್ಮೇಳನದ ಅಂಗವಾಗಿ ಹಮ್ಮಿಕೊಂಡ "ದೀಪದಾನ" ವಿಶೇಷ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಬಿಇಡಿ ಮುಗಿಸಿಕೊಂಡು ಹೋಗುತ್ತಿರುವ ವಿದ್ಯಾರ್ಥಿಗಳ ಹೆಗಲ ಮೇಲೆ ಈ ದೇಶದ ಶ್ರೇಷ್ಠ ವ್ಯಕ್ತಿಗಳನ್ನು ನಿರ್ಮಾಣ ಮಾಡುವ ಗುರುತರವಾದ ಜವಾಬ್ದಾರಿ ಇದೆ. ಶಿಕ್ಷಕ ಕೇವಲ ವಿದ್ಯಾರ್ಥಿಗಳಿಗೆ ಓದು ಬರಹ ಕಲಿಸುವುದಿಲ್ಲ ಅವನ ಜೀವನದ ಸರ್ವಾಂಗೀಣ ಪ್ರಗತಿಗೆ ಮಾರ್ಗದರ್ಶನವನ್ನು ಮಾಡುತ್ತಾನೆ.

ಈ ಶಿಕ್ಷಣ ಸಂಸ್ಥೆಯಲ್ಲಿ ನಿಮಗೆ ಶಿಕ್ಷಣದ ಜೊತೆ ಉನ್ನತ ಮೌಲ್ಯಗಳನ್ನೂ ತಿಳಿಸಿಕೊಡಲಾಗಿದೆ ಅವುಗಳನ್ನು ಜೀವನದ ಉದ್ದಕ್ಕೂ ಪಾಲಿಸಿ, ನಿಮ್ಮ ಪ್ರಯತ್ನ ಕೇವಲ ಒಂದು ಹುದ್ದೆಯನ್ನು ಪಡೆಯಲು ಮಾತ್ರ ಆಗದಿರಲಿ, ಜೀವನದಲ್ಲಿ ಶ್ರೇಷ್ಠ ಸಾಧನೆಯನ್ನು ಮಾಡುವ ಗುರಿಯನ್ನು ಇಟ್ಟುಕೊಳ್ಳಿ ಎಂದು ಸಲಹೆ ನೀಡಿದರು. ಅಧ್ಯಕ್ಷತೆ ವಹಿಸಿದ ಕಾಲೇಜಿನ ಪ್ರಾಚಾರ್ಯ ಡಾ. ಆರ್. ಎಂ.ಬಂಟನೂರ ಅವರು ವಿದ್ಯಾರ್ಥಿಗಳೊಂದಿಗೆ ಕಳೆದ ಎರಡು ವರ್ಷಗಳ ಅನುಭವಗಳನ್ನು ಹಚ್ಚಿಕೊಂಡು ಭಾವುಕರಾದರು.

ವಿದ್ಯಾರ್ಥಿಗಳ ಬಾಳಿನ ಪಯಣ ಸುಗಮ ಹಾಗೂ ಸಮೃದ್ಧವಾಗಿರಲು ಭಗವಂತನಲ್ಲಿ ಪ್ರಾರ್ಥಿಸಿದರು. ಸಮಾರಂಭದ ಸಾನಿಧ್ಯ ವಹಿಸಿದ ಗುಂಡಕನಾಳ ಬ್ರಹನ್ಮಠದ ಷ. ಬ್ರ. ಶ್ರೀ ಗುರುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು. ಇದೇ ಸಂದರ್ಭದಲ್ಲಿ ಕಾಲೇಜಿನ ವತಿಯಿಂದ ನಡೆಸಿದ ವಿವಿಧ ಕ್ರೀಡೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪಾರಿತೋಷಕಗಳನ್ನು



ನೀಡಿ ಪ್ರೋತ್ಸಾಹಿಸಲಾಯಿತು. ವೇದಿಕೆ ಕಾರ್ಯಕ್ರಮದ ನಂತರ ನಡೆದ ವಿದ್ಯಾರ್ಥಿಗಳ "ದೀಪದಾನ ಪ್ರತಿಜ್ಞಾವಿಧಿ" ಕಾರ್ಯಕ್ರಮ ಅರ್ಥಪೂರ್ಣವಾಗಿ ಜರುಗಿತು.

ವೇದಿಕೆಯಲ್ಲಿ ಸಂಘದ ಸದಸ್ಯರಾದ ಬಿ. ಎನ್.ಹಿಪ್ಪರಗಿ, ಕಾಶಿನಾಥ್ ಎಸ್.ಮುರಾಳ, ಎಂ.ಆರ್. ಕತ್ತಿ, ಸಿ. ಆರ್.ಕತ್ತಿ, ಆರ್. ಎಂ. ಸಾಲಂಕಿ, ಬಿ. ಎಂ. ಗುರಡ್ಡಿ, ಎಸ್.ಎಸ್.ಸರೂರ, ಅಶೋಕ ಜಾಲವಾದಿ ವಿ. ಬಿ.ಗಬಸಾವಳಗಿ, ವಿದ್ಯಾರ್ಥಿ ಒಕ್ಕೂಟದ ಪ್ರ.ಕಾ. ಶಿವರಾಜ ಉಪ್ಪಾರ, ಪಾರ್ವತಿ ಕಟ್ಟಿಮನಿ, ಯಮನಪ್ಪ ತಾಳಿಕೋಟಿ, ಶ್ರೀಮತಿ ಮಧು ನಾಡಗೌಡ ಇದ್ದರು. ಕಾರ್ಯಕ್ರಮದಲ್ಲಿ ಸಿಬ್ಬಂದಿ ವರ್ಗ ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು. ಪ್ರಶಿಕ್ಷಣಾರ್ಥಿ ಶಿವಲೀಲಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಉಪನ್ಯಾಸಕ ವಾಯ್ ಎಚ್ ಅಂಗಡಗೇರಿ ಸ್ವಾಗತಿಸಿದರು. ಸುರೇಶ ಬಡಿಗೇರ ಪರಿಚಯಿಸಿದರು. ಐಕ್ಯೂ ಎಸಿ ಸಂಯೋಜಕ ಯು. ಎನ್. ಮಂಗೊಂಡ ನಿರೂಪಿಸಿದರು.

ಜಾಲಹಳ್ಳಿಯಲ್ಲಿ ರಾಷ್ಟ್ರೀಯ ಪೋಷಣ್ ಮಾಸಾಚರಣೆ: ಗ್ರಾಮ ಮಟ್ಟದಲ್ಲಿ ಜಾಗೃತಿ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರಾಯಚೂರು, ಶಿಶು ಅಭಿವೃದ್ಧಿ ಯೋಜನೆ ಹಾಗೂ ಆರೋಗ್ಯ ಇಲಾಖೆ, ದೇವದುರ್ಗ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಪೋಷಣ್ ಅಭಿಯಾನದ ಅಂಗವಾಗಿ ಸೆಪ್ಟೆಂಬರ್ 1ರಿಂದ 30ರವರೆಗೆ ನಡೆಯುತ್ತಿರುವ ಪೋಷಣ್ ಮಾಸಾಚರಣೆ ಪ್ರಯುಕ್ತ ಜಾಲಹಳ್ಳಿಯ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನದ ಕಲ್ಯಾಣ ಮಂಟಪದಲ್ಲಿ ಗ್ರಾಮ ಮಟ್ಟದ ಜಾಗೃತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಮಕ್ಕಳಿಗೆ ಪೌಷ್ಟಿಕ ಆಹಾರ ನೀಡುವ ಮಹತ್ವ, ಗರ್ಭಿಣಿಯರು ಹಾಗೂ ಬಾಣಂತಿಯರ ಆರೋಗ್ಯ, ಮಕ್ಕಳ ದೈಹಿಕ ಬೆಳವಣಿಗೆ ಮತ್ತು ಪೌಷ್ಟಿಕಾಂಶದ



ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಒಕ್ಕೂಟದ ಶರಣಮ್ಮ ವಹಿಸಿದ್ದರು. ಊರಿನ ಮುಖಂಡ ಶ್ರೀಧರ್ ದೇಸಾಯಿ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ವೀರೇಶ್ ಅರಕೇರಾ, ಸದಸ್ಯರಾದ ಅಬ್ದುಲ್ ರಹಮಾನ್ ಖುರೇಶಿ, ಸಲಬಣ್ಣ ಹಂಪರಗುಂದಿ, ಅಂಗನವಾಡಿ ಕಾರ್ಯಕರ್ತೆ ಹೈದರಬಿ ಸೇ–ರಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಿಬ್ಬಂದಿ, ಸಿಐಟಿಯು ಅಧ್ಯಕ್ಷೆ ಲಕ್ಷ್ಮಿ ರಾಟೋಡ್ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಭಾಗವಹಿಸಿದ್ದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶ್ರೀದೇವಿ ಅವರು ಪೋಷಣ್ ಮಾಸಾಚರಣೆಯ ಉದ್ದೇಶ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಪೌಷ್ಟಿಕ ಆಹಾರದ ಮಹತ್ವದ ಕುರಿತು ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಗರ್ಭಿಣಿಯ–ರಿಗಾಗಿ ಶ್ರೀಮಂತ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ದೇವಮ್ಮ ಅವರು ಕಾರ್ಯಕ್ರಮಕ್ಕೆ ಸ್ವಾಗತಿಸಿದರು.

ಲಿಂಗಸೂಗೂರಿನಲ್ಲಿ ಅಂಜುಮನ್ ಲಿಂಗಸೂಗೂರ ತಾಲೂಕು ಕಮಿಟಿವತಿಯಿಂದ ಮಹಾತ್ಮ ಗಾಂಧೀಜಿ ಉದ್ಯಾನವನ ನಾಮಫಲಕ ಲೋಕಾರ್ಪಣೆ

❑ ನೈಜ್ಯ ದೆಸೆ ನ್ಯೂಸ್

ಲಿಂಗಸೂಗೂರು: ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಜಯಂತಿಯ ಅಂಗವಾಗಿ ಅಂಜುಮನ್–ಎ–ಮುಸ್ಲಿಮೀನ್ ಲಿಂಗಸೂಗೂರು ತಾಲೂಕು ಕಮಿಟಿ ವತಿಯಿಂದ ಲಿಂಗಸೂಗೂರು ಪೊಲೀಸ್ ಠಾಣೆ ಎದುರುಗಡೆಯಲ್ಲಿರುವ ಉದ್ಯಾನವನಕ್ಕೆ "ಮಹಾತ್ಮ ಗಾಂಧೀಜಿ ಉದ್ಯಾನವನ" ಎಂದು ನಾಮಕರಣ ಮಾಡಿ, ಶುಕ್ರವಾರ ಲೋಕಾರ್ಪಣೆಗೊಳಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಂಜುಮನ್–ಎ–ಮುಸ್ಲಿಮೀನ್ ಲಿಂಗಸೂಗೂರು ತಾಲೂಕು ಕಮಿಟಿಯ ಅಧ್ಯಕ್ಷ ಹುಸೇನ್ ಭಾಷಾ, "ಮಹಾತ್ಮ ಗಾಂಧೀ–ಜಿಯವರು ಸತ್ಯ, ಅಹಿಂಸೆ, ಶಾಂತಿ ಹಾಗೂ ಸರಳತೆಯ ಮೂಲಕ ದೇಶಕ್ಕೆ ಮಾತ್ರವಲ್ಲದೆ ಇಡೀ ವಿಶ್ವಕ್ಕೆ ಮಾನವೀಯತೆಯ ಸಂದೇಶವನ್ನು ಸಾರಿದ ಮಹಾನ್ ನಾಯಕರು. ಅವರ ಜೀವನ ಮತ್ತು ಆದರ್ಶಗಳು ಇಂದಿನ ಪೀಳಿಗೆಗೂ ಪ್ರೇರಣೆಯಾಗಿವೆ. ಜಾತಿ, ಧರ್ಮ, ಭಾಷೆಯ ಭೇದವಿಲ್ಲದೆ ಎಲ್ಲರೂ ಸಹೋದರತ್ವ, ಸೌಹಾರ್ದತೆ ಮತ್ತು ಶಾಂತಿಯಿಂದ ಬದುಕಬೇಕು ಎಂಬುದು ಗಾಂಧೀಜಿಯವರ ಆಶಯವಾಗಿತ್ತು," ಎಂದರು.

"ಗಾಂಧೀಜಿಯವರ ಹೆಸರನ್ನು ಈ ಉದ್ಯಾನವನಕ್ಕೆ ಇಡುವ ಮೂಲಕ ಅವರ ಆದರ್ಶಗಳನ್ನು ಸ್ಮರಿಸುವ ಸಣ್ಣ ಪ್ರಯತ್ನವನ್ನು ಅಂಜುಮನ್–ಎ–ಮುಸ್ಲಿಮೀನ್ ತಾಲೂಕು ಕಮಿಟಿ ಮಾಡಿದೆ. ಈ ಉದ್ಯಾನವನವು ಸಾರ್ವಜನಿಕರಿಗೆ ಉಪಯುಕ್ತವಾಗುವುದರ ಜೊತೆಗೆ, ಮುಂದಿನ ಪೀಳಿಗೆಗೆ ಮಹಾತ್ಮ ಗಾಂಧೀ–ಜಿಯವರ ಸತ್ಯ ಮತ್ತು ಅಹಿಂಸೆಯ ತತ್ವಗಳನ್ನು ನೆನಪಿಸುವ ಸ್ಥಳವಾಗಲಿ ಎಂಬುದು ನಮ್ಮ ಆಶಯ," ಎಂದು ಹುಸೇನ್ ಭಾಷಾ ತಿಳಿಸಿದರು.

ಕಾರ್ಯಕ್ರಮದಲ್ಲಿ ಅಂಜುಮನ್–



ಎ–ಮುಸ್ಲಿಮೀನ್ ಲಿಂಗಸೂಗೂರು ತಾಲೂಕು ಕಮಿಟಿಯ ಗೌರವಾಧ್ಯಕ್ಷ ಅನ್ಸರುದ್ದಿನ್, ಉಪಾಧ್ಯಕ್ಷ ಮೊಹಮ್ಮದ್ ಮುಸ್ತಫಾ, ಪ್ರಧಾನ ಕಾರ್ಯದರ್ಶಿ ಸಲೀಂ ಪಾಷಾ ಕಾರ್ಪೆಂಟ–ರ್, ಪದಾಧಿಕಾರಿಗಳಾದ ವಸೀಮ್ ಪಾಷಾ, ಶೇಖ್ ಅಲಿ, ರಜ್ಜಬ್, ಮುರ್ತುಜ, ಆದಿಲ್ ಹಾಗೂ ಲಾಲಾಸಾಬ್ ಉಪಸ್ಥಿತರಿದ್ದರು.

ಸಮಾಜದ ಮುಖಂಡರಾದ ಅಬ್ದುಲ್ ವಾಹಿದ್, ಯಿನುಸ್, ರಾಮಪ್ಪ, ಶಿವಪ್ಪ, ಅಮರೇಶ್ ಪವಾರ್, ಯಲ್ಲಪ್ಪ, ಸುರೇಶ್, ಗದ್ದೆಪ್ಪ, ಬಸಪ್ಪ ಮಿಂಚೆರಿ, ಬಸವರಾಜ್, ಉಮೇಶ್ ಮೋತಿ, ಮುತ್ತಪ್ಪ ಮಿಂಚೆರಿ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಜಾಲಹಳ್ಳಿಯಲ್ಲಿ ಮಹಾತ್ಮಗಾಂಧಿ ವೃತ್ತ ದಲ್ಲಿ ಅದ್ದೂರಿಯಾಗಿ ಮಹಾತ್ಮ ಗಾಂಧಿ ಜಯಂತಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ರಾಯಚೂರು ಜಿಲ್ಲೆ ದೇವದುರ್ಗ ತಾಲೂಕಿನ ಜಾಲಹಳ್ಳಿ ಪಟ್ಟಣದ ಹಟ್ಟಿ ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ಮಹಾತ್ಮ ಗಾಂಧಿ ವೃತ್ತದಲ್ಲಿ ಶುಕ್ರವಾರ ಮಹಾತ್ಮ ಗಾಂಧಿ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಉದ್ಘಾಟನೆಯನ್ನು ವಕೀಲ ರಾಜಾವಾಸುದೇವ ನಾಯಕ, ಶ್ರೀಧರ ದೇಸಾಯಿ ಹಾಗೂ ದುರುಗಪ್ಪ ರಾಮಪಾಳಿ ಅವರು ಮಹಾತ್ಮ ಗಾಂಧೀಜಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವ ಮೂಲಕ ನೆರವೇರಿಸಿದರು. ಬಳಿಕ ಬಾಬಾ ಮೆಡಿಕಲ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಜೀವನ, ಹೋರಾಟ ಹಾಗೂ ದೇಶದ ಸ್ವಾತಂತ್ರ್ಯ ಚಳವಳಿಗೆ ಅವರು ನೀಡಿದ ಕೊಡುಗೆಯನ್ನು ವಿವರಿಸಿದರು.

ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ



ರಂಗಣ್ಣ ಕೊಲ್ಕರ್ ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಆದರ್ಶ ಮತ್ತು ತತ್ವಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಗಾಂಧೀಜಿ ಅವರ ಹೋರಾಟದಿಂದ ದೊರೆತ ಸ್ವಾತಂತ್ರ್ಯವನ್ನು ಪ್ರತಿಯೊಬ್ಬರೂ ಕಾಪಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ಅಬ್ದುಲ್ ರಹಮಾನ್ ಖುರೇಶಿ

ವಕೀಲ ರಾಜಾವಾಸುದೇವ ನಾಯಕ ಮಾತನಾಡಿ, ಮಹಾತ್ಮ ಗಾಂಧೀಜಿ ಅವರು ದೇಶದ ಸ್ವಾತಂತ್ರ್ಯಕ್ಕಾಗಿ ನಿರಂತರ ಹೋರಾಟ ನಡೆಸಿದ್ದರು. ಶಾಂತಿ ಮತ್ತು ಅಹಿಂಸೆಯ ಮಾರ್ಗದ ಮೂಲಕ ಸ್ವಾತಂತ್ರ್ಯ ಚಳವಳಿಗೆ ಹೊಸ ದಿಕ್ಕು ನೀಡಿದ ಗಾಂಧೀಜಿ ಅವರ ಆದರ್ಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು.

ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಜೀವನ ಚರಿತ್ರೆ, ಹೋರಾಟ ಹಾಗೂ ದೇಶಕ್ಕಾಗಿ ಅವರು ಮಾಡಿದ ತ್ಯಾಗದ ಕುರಿತು ವಿವರಿಸಿದರು. ಕಾರ್ಯಕ್ರಮದಲ್ಲಿ ಸ್ಥಳೀಯ ಮುಖಂಡರಾದ ರಾಜಾ ವಾಸುದೇವ್ ನಾಯಕ ವಕೀಲರು, ಶ್ರೀಧರ ದೇಸಾಯಿ, ದುರುಗಪ್ಪ ರಾಮಪಾಳಿ, ರಂಗಣ್ಣ ಕೊಲ್ಕರ್, ಭೀಮಣ್ಣ, ಗುಮೇಧಾರ್ ಬುಡಪ್ಪ ಕಾವಲಿ, ಇಮಾಮ್ ಸಾಬ್ ಉದ್ದಾರ, ಹೈದರ್ ಸಾಬ್ ಮುಲ್ಲಾ, ರಂಗಪ್ಪ ಬಂಡಿ, ಶಿವು ಪಾಟೀಲ್ ಗಾಣದಾಳ್, ಅಯ್ಯನ್ ಗೌಡ ಮಾಸ್ತಿ,

ಪತ್ರಕರ್ತ ಗಿರಿಯಪ್ಪ ಪೂಜಾರಿ ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ತತ್ವ, ಆದರ್ಶಗಳನ್ನು ಅಳವಡಿಸಿಕೊಂಡು ಸಮಾಜದಲ್ಲಿ ಕೋಮುವಾದದ ವಿರುದ್ಧ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಹೇಳಿದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಮಕ್ತುಮ್ ಪರಾಶಿ, ರಂಗಪ್ಪ ಕುದರಿ, ಕುಮಾರ್ ಚಪ್ಪಳಕಿ, ಸಲಬಣ್ಣ ಹಂಪರಗುಂದಿ, ಶಿವಪ್ಪ ನಾಯಕ ಗಾಂಜಿ ಸೇ–ರಿದಂತೆ ಊರಿನ ಪ್ರಮುಖರಾದ ಹುಸೇನ್ ನಾಸಿ, ಆಂಜನೇಯ ರಾಮಪಾಳಿ, ಮೌನೇಶ್ ಚಪ್ಪಳಕಿ, ರಾಜು ತವಗ, ಮಹೇಬೂಬ್ ಕುರುಕುಂದಿ, ಪತ್ರಕರ್ತ ಗಿರಿಯಪ್ಪ ಪೂಜಾರಿ, ತಾತಪ್ಪ ನಾಯಕ, ವೆಂಕಟೇಶ್ ಮುಸ್ಲಳ್ಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸ್ಥಳೀಯ ಮುಖಂಡರು, ಸಾರ್ವಜನಿಕರು ಹಾಗೂ ವಿವಿಧ ಸಂಘ–ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

ವಚನ ದರ್ಶನ

ಜನಿತಕ್ಕೆ ತಾಯಾಗಿ ಹೆತ್ತಳು ಮಾಯೆಮೋಹಕ್ಕೆ ಮಗಳಾಗಿ ಹುಟ್ಟಿದಳು ಮಾಯೆಕೂಟಕ್ಕೆ ಸ್ತ್ರೀಯಾಗಿ ಕೂಡಿದಳು ಮಾಯೆಇದಾವಾವ ಪರಿಯಲ್ಲಿ ಕಾಡಿತ್ತು ಮಾಯೆಈ ಮಾಯೆಯ ಕಳೆವಡೆ ಎನ್ನಳವಲ್ಲನೀವೇ ಬಲ್ಲಿರಿ ಕೂಡಲಸಂಗಮದೇವಾ!

ಇದು ವಿಶ್ವಗುರು ಬಸವಣ್ಣನವರ ಪ್ರಸಿದ್ಧ ವಚನವಾಗಿದೆ.

ಮಾಯೆಯು ಮನುಷ್ಯನ ಹುಟ್ಟಿಗೆ ತಾಯಾಗಿ ಜನ್ಮ ನೀಡುತ್ತಾಳೆ, ಮೋಹಕ್ಕೆ ಮಗಳಾಗಿ ಹುಟ್ಟುತ್ತಾಳೆ ಮತ್ತು ಸಂಸಾರ ಅಥವಾ ಕೂಟಕ್ಕೆ ಸ್ತ್ರೀಯಾಗಿ (ಹೆಂಡತಿಯಾಗಿ) ಕೂಡುತ್ತಾಳೆ. ಈ ಮಾಯೆಯು ನಾನಾ ವಿಧವಾಗಿ ಮನುಷ್ಯನನ್ನು ಕಾಡುತ್ತದೆ. ಇಂತಹ ಪ್ರಬಲವಾದ ಮಾಯೆಯನ್ನು ಕಳಚಿಹಾಕುವುದು ಅಥವಾ ಗೆಲ್ಲುವುದು ನನ್ನೊಬ್ಬನಿಂದ ಸಾಧ್ಯವಿಲ್ಲ, ಹೇ ಕೂಡಲಸಂಗಮದೇವಾ, ಇದನ್ನು ನಿನ್ನ ಕೃಪೆಯಿಂದ ನೀನೇ ಬಲ್ಲೆ ಮತ್ತು ಅದನ್ನು ನಿವಾರಿಸಬೇಕು ಮನುಕುಲದ ದಾರಿದೀಪ ವಚನಗಳು ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

ವಿಶೇಷ ಮಕ್ಕಳ ಶಾಲೆಗೆ ಇನ್ನರ್ ವೀಲ್ ಕ್ಲಬ್‌ನಿಂದ ನೆರವು

❑ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಇನ್ನರ್ ವೀಲ್ ಕ್ಲಬ್ ಆಫ್ ಕುಷ್ಟಗಿ ವತಿಯಿಂದ ಗದಗ-ಬೆಟಗೇರಿಯ ಮಂಜು ಶಿಕ್ಷಣ ಸಂಸ್ಥೆಯ ಬುದ್ಧಿಮಾಂದ್ಯ ಮಕ್ಕಳ ವಿಶೇಷ ಶಾಲೆಗೆ ಭೇಟಿ ನೀಡಿ, ಶಾಲೆಯ ಅಭಿವೃದ್ಧಿ ಹಾಗೂ ವಿಶೇಷ ಮಕ್ಕಳ ಕಲ್ಯಾಣಕ್ಕಾಗಿ ವಿವಿಧ ರೀತಿಯ ನೆರವು ನೀಡಲಾಯಿತು. ಕ್ಲಬ್ ಸದಸ್ಯರಿಂದ ಸಂಗ್ರಹಿಸಿದ ಹಣದಿಂದ ಶಾಲೆಯ ದುಸ್ಥಿತಿಯಲ್ಲಿದ್ದ ಒಂದು ಕೊಠಡಿಯ ದುರಸ್ತಿಗಾಗಿ ಆರ್ಥಿಕ ನೆರವು ನೀಡಲಾಯಿತು.



ವಿಶೇಷ ಮಕ್ಕಳ ವ್ಯಾಯಾಮ ಹಾಗೂ ಥೆರಪಿಗೆ ಅನುಕೂಲವಾಗುವಂತೆ ಅಗತ್ಯವಾದ ವ್ಯಾಯಾಮ ಸಾಮಗ್ರಿಗಳು ಮತ್ತು ಉಪಕರಣಗಳನ್ನು ವಿತರಿಸಲಾಯಿತು. ಅಲ್ಲದೆ, ಮಕ್ಕಳಿಗಾಗಿ ಒಂದು ದಿನದ ಮಧ್ಯಾಹ್ನದ ಊಟದ ವ್ಯವಸ್ಥೆಯನ್ನೂ ಮಾಡಲಾಯಿತು. ಶಾಲೆಯಲ್ಲಿ ವಿಶೇಷ ಮಕ್ಕಳಿಗೆ ಶಿಕ್ಷಣದ ಜೊತೆಗೆ ದೈಹಿಕ ಸಾಮರ್ಥ್ಯ ವೃದ್ಧಿಗಾಗಿ ವ್ಯಾಯಾಮ ಮತ್ತು ಥೆರಪಿ, ಶಿಸ್ತು, ದೈನಂದಿನ ಚಟುವಟಿಕೆಗಳು ಹಾಗೂ ಅವರ ಅಗತ್ಯಕ್ಕೆ ತಕ್ಕ ಆರೈಕೆಯನ್ನು ನೀಡಲಾಗುತ್ತಿದೆ. ಪೋಷಕರು ಮಕ್ಕಳನ್ನು ಶಾಲೆಗೆ ಕರೆತಂದು ಬಿಟ್ಟುಹೋಗುವ ಸಂದರ್ಭದಲ್ಲಿ, ಮಕ್ಕಳ ಸಂಪೂರ್ಣ ಆರೈಕೆ ಮತ್ತು ಅಭಿವೃದ್ಧಿಯ ಜವಾಬ್ದಾರಿಯನ್ನು ಹೊತ್ತುಕೊಳ್ಳುವುದು ಶಿಕ್ಷಕರಿಗೆ ಸವಾಲಿನ ಹಾಗೂ ಜವಾಬ್ದಾರಿಯುತ ಸೇವೆಯಾಗಿದೆ.

ಇನ್ನರ್ ವೀಲ್ ಕ್ಲಬ್ ಆಫ್ ಕುಷ್ಟಗಿ ವತಿಯಿಂದ ಕಳೆದ ಕೆಲವು ವರ್ಷಗಳಿಂದಲೂ ಈ ಶಾಲೆಗೆ ಸಾಧ್ಯವಾದಷ್ಟು ಸಣ್ಣಪುಟ್ಟ ನೆರವು ನೀಡುತ್ತಾ ಬರಲಾಗಿದ್ದು, ಈ ವರ್ಷವೂ ಮಕ್ಕಳ ಅಗತ್ಯವನ್ನು ಮನಗಂಡು ಸೇವಾ ಕಾರ್ಯ ಕೈಗೊಳ್ಳಲಾಗಿದೆ. ಈ ಸಂದರ್ಭದಲ್ಲಿ ಕ್ಲಬ್ ಅಧ್ಯಕ್ಷೆ ಗೌರಮ್ಮ ಕುಡುತಿನಿ, ಕ್ಲಬ್ ಐಎಸ್‌ಒ ವಂದನಾ ಗೋಗಿ, ಸುದೀಪ್ತಾ ಕಾಕಂಡಗಿ ಹಾಗೂ ಕ್ಲಬ್ ಕಾರ್ಯದರ್ಶಿ ಶ್ರೀದೇವಿ ಮಸ್ಕಿಮಠ ಉಪಸ್ಥಿತರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಅರಕೇರಾದಲ್ಲಿ ಗಾಂಧಿ ಜಯಂತಿ ಸಾಮೂಹಿಕ ಶ್ರಮದಾನ ಕಾರ್ಯಕ್ರಮ:ಸ್ವಚ್ಛತೆ ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯ :ಚನ್ನಬಸವ

❑ ನೈಜ್ಯ ದೆಸೆ ನ್ಯೂಸ್

ಅರಕೇರಾ: ಸ್ವಚ್ಛತೆ ಕಾಪಾಡಿ ಪರಿಸರಕ್ಕಾಗಿ ನಮ್ಮ ಸುತ್ತಮುತ್ತಲ್ಲಿನ ಪ್ರದೇಶ ಸ್ವಚ್ಛತೆ ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಚನ್ನಬಸವ ಹೇಳಿದರು.

ಅವರು ಅರಕೇರಾ ಗ್ರಾಮ ಪಂಚಾಯತ ಹಾಗೂ ಸ್ಥಳಿಯ ಗ್ರಾಮಸ್ಥರ ಕೂಡಿಕೊಂಡು ಗಾಂಧಿ ಜಯಂತಿ ಅಂಗವಾಗಿ ಸ್ವಚ್ಚತಾ ಹಿ ಸೇವಾ ಮತ್ತು ಸಾಮೂಹಿಕ ಶ್ರಮದಾನ ಅಭಿಯಾನದ ಅಂಗವಾಗಿ ಬಸ್ಸನಿಲ್ದಾಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಸ್ವಚ್ಚತಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಸಮಾಜದ ಸ್ವಾಸ್ಥ ?ಯವನ್ನು ಕಾಪಾಡಲು ಸಾರ್ವಜನಿ



ಕರು,ವಿದ್ಯಾರ್ಥಿಗಳು,ಜನಪ್ರತಿನಿಧಿಗಳು ತಮ್ಮ ಸುತ್ತಮುತ್ತಲ್ಲಿನ ಸ್ವಚ್ಛತೆ ಕಾಪಾಡುವದರಿಂದ ಉತ್ತಮ ವಾತಾವರಣವನ್ನು ನೋಡಲು ಸಾಧ್ಯ. ಸ್ವಚ್ಛತೆ ಕಾಪಾಡುವುದು ಕೇವಲ ಸ್ವಚ್ಚತಾ ಕಾರ್ಮಿಕರ ಕೆಲಸ ಮಾತ್ರವೇ ಅಲ್ಲ ಅದು ಪ್ರತಿಯೊಬ್ಬರ ಕರ್ತವ್ಯ ಕೂಡಾ ಸ್ವಚ್ಚತೆ ಕಾಪಾಡಿ ಸ್ವಚ್ಚತಾ ಕಾಮಿಕರನ್ನು ಗೌರವಿಸಬೇಕು ಎಂದರು.ಸ್ವಚ್ಚಗೊಳಿಸಿ ಸ್ವಚ್ಚತೆಯ ಬಗ್ಗೆ ಜಾಗೃತಿ ಮೂಡಿಸಲಾಯಿತು. ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ಚನ್ನಬಸವ ಮಾಜಿ ಗ್ರಾಮ ಪಂಚಾಯತ ಅಧ್ಯಕ್ಷರಾದ ತಿಮ್ಮಪ್ಪನಾಯಕ ಪೋಲಿಸ್ ಪಾಟೀಲ್,ವೆಂಕಟೇಶನಾಯಕ ದೊರೆ,ಚಂದ್ರಶೇಖರಶೆಟ್ಟಿ, ಡಾ.ರಾಗವೇಂದ್ರವಡಿಗೇರಾ,ರಾಮನಗೌಡದೊರೆ,ಬಸ್ಸನಿಲ್ದಾಣ ನಿಯಂತ್ರಣಾಧಿಕಾರಿ ಶೇಖರಪ್ಪ ಗುಡಿ, ಗ್ರಾಮ ಪಂಚಾಯತ ಕರವಸೂಲಿಗಾರರಾದ ಇಬ್ರಾಹಿಂಸಾಬ,ಕಂಪ್ಯೂಟರ್ ಅಪರೇಟರ್ ರಾಘವೇಂದ್ರ, ಪಂಚಾಯತ ಸ್ವಚ್ಚತೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ತಾಲೂಕ ಆಡಳಿತದಿಂದ ಮಹಾತ್ಮಾ ಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಜಯಂತಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ನಮ್ಮ ದೇಶಕ್ಕೆ ಸ್ವಾತಂತ್ರ್ಯವನ್ನು ತಂದು ಕೊಟ್ಟ ಮಹಾತ್ಮ ಗಾಂಧಿಯವರ ಜನ್ಮದಿನವನ್ನು ಪ್ರತಿ ವರ್ಷ ಅಕ್ಟೋಬರ್ 2 ರಂದು ದೇಶಾದ್ಯಂತ ಸಂಭ್ರಮದಿಂದ ಆಚರಿಸಲಾಗುತ್ತಿದೆ ಎಂದು ತಹಸೀಲ್ದಾರ್ ಸತ್ಯಮ್ಮ ತಿಳಿಸಿದರು.

ಅವರಿಂದು ತಾಲೂಕಆಡಳಿತ ಆಯೋಜಿಸಲಾಗಿದ್ದ ಗಾಂಧಿ ಜಯಂತಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಅವರ ಜಯಂತಿ ಕಾರ್ಯಕ್ರಮದಲ್ಲಿ ಪೂಜೆ ಸಲ್ಲಿಸಿ ನಂತರ ಮಾತನಾಡಿದ ಅವರು ಅಹಿಂಸೆಯೇ ಗಾಂಧಿಜೀಯವರ ಅಸ್ತ್ರವಾಗಿತ್ತು. ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಅವರು ನೀಡಿದ ಕೊಡುಗೆಗಳನ್ನು ಗೌರವಿಸಲು ಅವರ ಜನ್ಮದಿನವಾದ ಅಕ್ಟೋಬರ್ 2 ಅನ್ನು ರಾಷ್ಟ್ರೀಯ ರಜಾ ದಿನವೆಂದು ಗುರುತಿಸಲಾಗಿದೆ.

ವಿಶ್ವಸಂಸ್ಥೆಯು ಗಾಂಧಿ ಜಯಂತಿಯನ್ನು'ಅಂತರಾಷ್ಟ್ರೀಯ ಅಹಿಂಸಾ ದಿನ' ಎಂದು ಆಚರಿಸಿ ಮಹಾತ್ಮ ಗಾಂಧಿಗೆ ತಮ್ಮ ಗೌರವ ನಮನಗಳನ್ನು ಸಲ್ಲಿಸುತ್ತದೆ. ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿಯವರು 17 ತಿಂಗಳ ಕಾಲ ಪ್ರಧಾನಿ ಯಾಗಿದ್ದರೂ ಕೂಡ ಅವರು ಮಾದರಿ ಪ್ರಧಾನಿಯಾಗಿ ಕಾರ್ಯ ನಿರ್ವಹಿಸಿದ್ದಾರೆ.

ಎರಡನೇ ಜಾಗತಿಕ ಸಮರದ ನಂತರ ಭುಗಿಲೆದ್ದ ಅತಿ ದೊಡ್ಡ ಸಂಘರ್ಷವಾದ 1965 ರ ಪಾಕಿಸ್ತಾನ ಮತ್ತು ಭಾರತ ಯುದ್ಧ



ಸಂದರ್ಭದಲ್ಲಿ ಅವರು ದೇಶ ರಕ್ಷಣೆಗೆ ತೆಗೆದುಕೊಂಡ ನಿರ್ಧಾರಗಳು ಶ್ಲಾಘನೀಯ ವಾದದ್ದು ಎಂದರು. ಈ ಸಂದರ್ಭದಲ್ಲಿ ತಾಲೂಕ ಆಡಳಿತದ ಎಲ್ಲಾ ಸಿಬ್ಬಂದಿಗಳು ಇದ್ದರು .

ವಿದ್ಯುತ್ ಕಂಬ, ತಂತಿ ಸಮಸ್ಯೆ: ಜೆಸ್ಕಾಂ ಅಧಿಕಾರಿಗಳ ಸಂಪರ್ಕಕ್ಕೆ ಕೋರಿಕೆ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ತಾಲ್ಲೂಕು ವ್ಯಾಪ್ತಿಯಲ್ಲಿ ವಿದ್ಯುತ್ ಕಂಬಗಳು ಮುರಿದಿದ್ದರೆ, ಬಾಗಿದ್ದರೆ ಅಥವಾ ವಿದ್ಯುತ್ ತಂತಿಗಳು ಕೆಳಗೆ ಜೋತು ಬಿದ್ದಿರುವುದು ಕಂಡುಬಂದರೆ ಸಾರ್ವಜನಿಕರು ತಕ್ಷಣವೇ ಮಾಹಿತಿ ನೀಡುವಂತೆ ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಕೋರಿದ್ದಾರೆ.

ಸಮಸ್ಯೆ ಕಂಡುಬಂದಲ್ಲಿ ಸಾರ್ವಜನಿಕರು ಆ ಸ್ಥಳದ ನಿಖರ ವಿಳಾಸ ಮತ್ತು ಛಾಯಾಚಿತ್ರದ (ಫೋಟೋ)



ಜೊತೆಗೆ ಜೆಸ್ಕಾಂನ ಈ ಕೆಳಗಿನ ಮೊಬೈಲ್ ಸಂಖ್ಯೆಗಳಿಗೆ ಮಾಹಿತಿ ನೀಡಬಹುದಾಗಿದೆ:
*** ಎ.ಇ.ಇ ಶ್ರೀನಿವಾಸ್ ಪ್ರಸಾದ್: 9449597416**
*** ಎ.ಇ ಭೀಮೇಶ್: 94808 45163**
*** ಕಂಪ್ಲಿ ಪಟ್ಟಣ, ರಾಮಸಾಗರ, ನಂ. 10 ಮುದ್ದಾಪುರ ವ್ಯಾಪ್ತಿ: ಎ.ಇ ವಿನೋದ್ ಕುಮಾರ್ (94808 44965)**
*** ಕಂಪ್ಲಿ ಗ್ರಾಮೀಣ, ಹಂಪಾದೇವನಹಳ್ಳಿ, ಸಣಾಪುರ, ದೇವಸಮುದ್ರ ಭಾಗ: ಎ.ಇ ಮಹಾಂತೇಶ್ ತುಂಬದ್ (94483 97533)**
*** ಮೆಟ್ರಿ, ಸುಗ್ಗೇನಹಳ್ಳಿ, ದೇವಲಾಪುರ ಭಾಗ: ಎ.ಇ ಸಮೀವುಲ್ಲಾ (94808 44996)**
*** ಬಿಲ್ಲಿಂಗ್ ಸಂಬಂಧಿತ ದೂರುಗಳು: ವಿಜಯ್ ಕುಮಾರ್ (94808 45141)**
*** ಪಟ್ಟಣ ವ್ಯಾಪ್ತಿಯ ವಿದ್ಯುತ್ ವ್ಯತ್ಯಯ ದೂರುಗಳು/ಸಹಾಯವಾಣಿ: 94808 45104**

ಇದರೊಂದಿಗೆ ಗ್ರಾಹಕರು ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿಯ ಗ್ರಾಮೀಣ ವಿದ್ಯುತ್ ಪ್ರತಿನಿಧಿಗಳನ್ನು (ಲೈನ್‌ಮನ್) ಸಂಪರ್ಕಿಸಿಯೂ ದೂರು ದಾಖಲಿಸಬಹುದು ಎಂದು ಜೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

ಗಾಂಧಿ ಸ್ಪರ್ಶಿಸಿದ ನೆಲವನ್ನು ಸಂರಕ್ಷಿಸಿ, ಪ್ರವಾಸೋದ್ಯಮವನ್ನಾಗಿ ಮಾಡಲಾಗುವುದು: ಶಾಸಕ ದರ್ಶನ್ ದೃವನಾರಾಯಣ್

❑ ನೈಜ್ಯ ದೆಸೆ ನ್ಯೂಸ್

ತಾಂಡವಪುರ ಅಕ್ಟೋಬರ್ 2:ಮಹಾತ್ಮ ಗಾಂಧೀಜಿಯವರು 1934ರ ಜನವರಿ 5ರಂದು ಮೈಸೂರು ಪ್ರವಾಸದ ಸಂದರ್ಭದಲ್ಲಿ ತಗಡೂರು, ಬದನವಾಳು ಮತ್ತು ನಂಜನಗೂಡಿಗೆ ಭೇಟಿ ನೀಡಿದ್ದ ಸ್ಥಳ ಯಥಾವತ್ತಾಗಿ ಸಂರಕ್ಷಿಸಿ ಅದನ್ನು ಪ್ರವಾಸೋದ್ಯಮನವನ್ನಾಗಿ ಅಭಿವೃದ್ಧಿಗೊಳಿಸಲಾಗುವುದು ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ತಿಳಿಸಿದರು.

ಅವರು ಇಂದು ಗಾಂಧಿ ಜಯಂತಿಯ ಪ್ರಯುಕ್ತ ದಕ್ಷಿಣ ಕಾಶಿ ನಂಜನಗೂಡುತಾಲ್ಲೂಕು ಆಡಳಿತ ಕಛೇರಿಯ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ವತಿಯಿಂದ ನಡೆದ ಮಹಾತ್ಮ ಗಾಂಧಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಅವರ ಜನ್ಮದಿನಾಚರಣೆಯನ್ನು ಆಚರಿಸುವ ಮೂಲಕ ಕಾರ್ಯಕ್ರಮಕ್ಕೆ ಶಾಸಕ ದರ್ಶನ್ ಧ್ರುವನಾರಾಯಣ್ ರವರು ಚಾಲನೆ ನೀಡಿದರು ನಂತರ ಮಾತನಾಡಿದ ಅವರು ಮಹಾತ್ಮ ಗಾಂಧಿಯವರು ಮೈಸೂರು ಪ್ರವಾಸಿ ಸಂದರ್ಭದಲ್ಲಿ ಐತಿಹಾಸಿಕ ಬದನವಾಳು ತಗಡೂರು ಮತ್ತು ನಂಜನಗೂಡಿಗೆ ಭೇಟಿ ನೀಡಿದರು.

ಗ್ರಾಮದಲ್ಲಿ ಖಾದಿ ಗ್ರಾಮೋದ್ಯೋಗ ಮತ್ತು ಗುಡಿ ಕೈಗಾರಿಕೆಗಳಿಗೆ ಉತ್ತೇಜನ ನೀಡುವ



ಹಿನ್ನೆಲೆಯಲ್ಲಿ ಖಾದಿ ಗ್ರಾಮೋದ್ಯೋಗವನ್ನು ಸ್ಥಾಪಿಸಿದರು. ಈ ಅವಿಸ್ಮರಣೀಯ ಸಂದರ್ಭವನ್ನು ಮುಂದುವರಿಸಲು ಅವರು ಮೆಟ್ಟಿದ ಮಣ್ಣಿನಲ್ಲಿ ಯಥವತ್ತಾಗಿ ಕಾದಿ ಗ್ರಾಮೋದ್ಯೋಗವನ್ನು ಮುಂದುವರಿಸಿ ಆ ಸ್ಥಳವನ್ನು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಗೊಳಿಸಲಾಗುವುದು ಮುಂದಿನ ಯುವ ಪೀಳಿಗೆಗೆ ಮಹಾತ್ಮ ಗಾಂಧೀಜಿ ಅವರು ನಂಜನಗೂಡಿಗೆ ಭೇಟಿ ನೀಡಿದ ಸಂದರ್ಭ ಮತ್ತು ಅದರ ಉದ್ದೇಶಗಳ ಬಗ್ಗೆ ಬೃಹದಾಕಾರದಲ್ಲಿ ಕೈಬರಹಗಳನ್ನು ಬರೆಸಲಾಗುವುದು ಎಂದರು.

ಮಹಾತ್ಮ ಗಾಂಧಿಯವರು ಪ್ರತಿ ಗ್ರಾಮವನ್ನು ಅಭಿವೃದ್ಧಿಗೊಳಿಸುವುದರ ಜೊತೆಗೆ ಗ್ರಾಮಗಳು ಸ್ವಾವಲಂಬಿಗಳಾಗಿ ಬದುಕಬೇಕು ಗ್ರಾಮೀಣ ಪ್ರದೇಶಗಳಲ್ಲಿ ಗುಡಿ ಕೈಗಾರಿಕೆಗಳು. ಗುಡಿ ಕೈಗಾರಿಕೆಗಳಿಂದ ಗ್ರಾಮೀಣಾಭಿವೃದ್ಧಿಯಾಗುತ್ತದೆ ಎಂಬುವುದರಲ್ಲಿ ಬಲವಾದ ನಂಬಿಕೆಯನ್ನು.

ಈ ನೆಲೆಯಲ್ಲಿ ಯುವಕರ ಆಲೋಚನೆ ಹಿರಿಯರ ಮಾರ್ಗದರ್ಶನದಿಂದ ಮುಂದಿನ ದಿನಗಳಲ್ಲಿ ಕ್ಷೇತ್ರದಲ್ಲಿ ಗುಡಿ ಕೈಗಾರಿಕೆಗೆ ಉತ್ತೇಜನ ನೀಡಲಾಗುವುದು. ಭಾರದ್ ಜೋಡ ಯಾತ್ರೆ ಸಂದರ್ಭದಲ್ಲಿ ಕೇಂದ್ರದಲ್ಲಿ ವಿರೋಧ ಪಕ್ಷದ ನಾಯಕರಾಗಿರುವ ರಾಹುಲ್ ಗಾಂಧಿಯವರ ಮಾತಿನಂತೆ ಬದನಾಳು ಗ್ರಾಮವನ್ನು ಪ್ರವಾಸ ಉದ್ಯಮವನ್ನಾಗಿ ಮಾರ್ಪಡು ಮಾಡಲಾಗುವುದು ಗಾಂಧೀಜಿಯವರು ಬಂದು ಹೋದ ಸ್ಥಳವನ್ನು ಅಭಿವೃದ್ಧಿಗೊಳಿಸಲಾಗುವುದು ಎಂದರು. ಮಹಾತ್ಮ ಗಾಂಧೀಜಿಯವರ ವಿಚಾರಗಳಿಂದ ಪ್ರಭಾವಿತರಾದ ಶಾಸ್ತ್ರಿಯವರು ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಂಡರು. ಅಸಹಕಾರ ಚಳವಳಿ ಸೇರಿದಂತೆ ಸ್ವಾತಂತ್ರ್ಯ ಚಳವಳಿಯಲ್ಲಿ ಭಾಗವಹಿಸಿ ಬ್ರಿಟಿಷರ ಜೈಲುವಾಸವನ್ನೂ ಅನುಭವಿಸಿದರು.

ಒಟ್ಟು ಸುಮಾರು ಏಳು ವರ್ಷಗಳ ಕಾಲ ಅವರು ಬ್ರಿಟಿಷರ ಕಾರಾಗೃಹದಲ್ಲಿದ್ದರು.ಸ್ವಾತಂತ್ರ್ಯಾನಂತರ ಅವರು ಕೇಂದ್ರ ಸರ್ಕಾರದಲ್ಲಿ ರೈಲ್ವೆ, ಸಾರಿಗೆ ಮತ್ತು ಸಂಪರ್ಕ, ವಾಣಿಜ್ಯ ಮತ್ತು ಕೈಗಾರಿಕೆ ಹಾಗೂ ಗೃಹ ವ್ಯವಹಾರ ಸೇರಿದಂತೆ ಹಲವು ಜವಾಬ್ದಾರಿಗಳನ್ನು ನಿರ್ವಹಿಸಿದರು. ರೈಲ್ವೆ ಸಚಿವರಾಗಿದ್ದ ಸಂದರ್ಭದಲ್ಲಿ ಸಂಭವಿಸಿದ ರೈಲು ಅಪಘಾತದ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಿದ ಘಟನೆ ಅವರ ಸಾರ್ವಜನಿಕ ಜೀವನದ ಪ್ರಾಮಾಣಿಕತೆಗೆ ಉದಾಹರಣೆಯಾಗಿದೆ ಎಂದರು. ಈ ವೇಳೆ ಮಾಜಿ ಶಾಸಕರಾದ ಕಳಲೆ ಕೇಶವಮೂರ್ತಿ, ತಹಸೀಲ್ದಾರ್ ಸ್ಮಿತಾ ರಾಮು, ಇಓ ಜೆರಾಲ್ಡ್ ರಾಜೇಶ್, ನಗರ ಬ್ಲಾಕ್ ಅಧ್ಯಕ್ಷರಾದ ಸಿ. ಎಂ ಶಂಕರ್ , ದೇವಸ್ಥಾನ ವ್ಯವಸ್ಥಾನ ಸಮಿತಿ ಅಧ್ಯಕ್ಷರಾದ ಚಿನ್ನದ ಗುಡಿ ಹುಂಡಿಬಸವೇಗೌಡ ಮುಖ್ಯ ಭಾಷಣಕಾರರಾದ ನಂಜುಂಡಯ್ಯ, ಮುಖಂಡರಾದ ಗಾಯತ್ರಿ ಮೋಹನ್ , ಮಂಜುನಾಥ್, ಶ್ರೀಧರ್ , ಗೋವಿಂದ ರಾಜ್, ಅಬ್ದುಲ್ ಖಾದರ್, ಗುರುಮಾಲ್ಲಪ್ಪ ರವರು ಸೇರಿದಂತೆ ಅಧಿಕಾರಿಗಳು ವಿವಿಧ ಸಂಘ ಸಂಸ್ಥೆಯ ಅಧ್ಯಕ್ಷರು ಪದಾಧಿಕಾರಿಗಳು ಮುಖಂಡರು ಹಾಜರಿದ್ದರು.

ಫೆಡರಲ್ ಶಿಕ್ಷಣ ಸಂಸ್ಥೆಯಲ್ಲಿ ಗಾಂಧೀಜಿ-ಶಾಸ್ತ್ರಿ ಜಯಂತಿ ಆಚರಣೆ ಸ್ವಚ್ಛತಾ ಆಂದೋಲನದಲ್ಲಿ ವಿದ್ಯಾರ್ಥಿಗಳು, ಸಿಬ್ಬಂದಿ ಭಾಗಿ

❑ ನೈಜ್ಯ ದೆಸೆ ನ್ಯೂಸ್

ಸಿರವಾರ, ಅ. 2: ಯರಮರಸ್ ಕ್ಯಾಂಪ್‌ನಲ್ಲಿರುವ ಫೆಡರಲ್ ಶಿಕ್ಷಣ ಸಂಸ್ಥೆಯ ಸಮೂಹಗಳ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 157ನೇ ಜಯಂತಿ ಹಾಗೂ ಭಾರತದ 2ನೇ ಪ್ರಧಾನಮಂತ್ರಿ ಶ್ರೀ ಲಾಲ್ ಬಹದ್ದೂರ್ ಶಾಸ್ತ್ರಿಯವರ 122ನೇ ಜನ್ಮದಿನಾಚರಣೆಯನ್ನು ಶುಕ್ರವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಸಂಸ್ಥೆಯ ಆವರಣದಲ್ಲಿ ಬೆಳಿಗ್ಗೆ 9 ಗಂಟೆಗೆ ನಡೆದ ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಮಹ್ಮದ್ ಅಬ್ದುಲ್ ಹೈ ಫಿರೋಜ್ ಅವರು ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಯವರ ಭಾವಚಿತ್ರಗಳಿಗೆ ಮಾಲಾರ್ಪಣೆ ಮಾಡಿ ಪುಷ್ಪನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಹಾತ್ಮ ಗಾಂಧೀಜಿಯವರ ಸ್ವಾತಂತ್ರ್ಯ ಹೋರಾಟ, ಸತ್ಯ ಮತ್ತು ಅಹಿಂಸೆಯ ತತ್ವಗಳು ಹಾಗೂ ದೇಶದ ಜನರಲ್ಲಿ ಸ್ವಚ್ಛತೆ ಮತ್ತು ಸಾಮಾಜಿಕ ಜವಾಬ್ದಾರಿಯ ಅರಿವು ಮೂಡಿಸುವಲ್ಲಿ ಅವರು ನೀಡಿದ ಕೊಡುಗೆಯನ್ನು ಸ್ಮರಿಸಲಾಯಿತು. ಹಾಗೆಯೇ ಲಾಲ್ ಬಹದ್ದೂರ್ ಶಾಸ್ತ್ರಿಯವರ ಸರಳತೆ, ಪ್ರಾಮಾಣಿಕತೆ, ಶಿಸ್ತು, ದೇಶಭಕ್ತಿ ಹಾಗೂ ಕರ್ತವ್ಯನಿಷ್ಠೆಯನ್ನು ನೆನಪಿಸಿಕೊಳ್ಳಲಾಯಿತು.



ವಿದ್ಯಾರ್ಥಿಗಳಲ್ಲಿ ದೇಶಪ್ರೇಮದ ಅರಿವು ಶಿಕ್ಷಣವೆಂದರೆ ಕೇವಲ ಪಠ್ಯಪುಸ್ತಕದ ಜ್ಞಾನಕ್ಕೆ ಸೀಮಿತವಾಗದೆ, ಉತ್ತಮ ನಾಗರಿಕ ಗುಣಗಳನ್ನು ಬೆಳೆಸುವ ಪ್ರಕ್ರಿಯೆಯಾಗಿದೆ. ಗಾಂಧೀಜಿ ಮತ್ತು ಶಾಸ್ತ್ರಿಯವರಂತಹ ಮಹನೀಯರ ಜೀವನ ಮತ್ತು ಆದರ್ಶಗಳನ್ನು ವಿದ್ಯಾರ್ಥಿಗಳು ತಿಳಿದುಕೊಂಡು, ಅವುಗಳಿಂದ ಪ್ರೇರಣೆ ಪಡೆದು ಸಮಾಜದ ಬಗ್ಗೆ ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು ಎಂಬ ಸಂದೇಶವನ್ನು ಕಾರ್ಯಕ್ರಮದಲ್ಲಿ ನೀಡಲಾಯಿತು.

ಸ್ವಚ್ಛತಾ ಆಂದೋಲನ ಜಯಂತಿ ಕಾರ್ಯಕ್ರಮದ ಬಳಿಕ ಶಾಲಾ ಆವರಣದಲ್ಲಿ ಸ್ವಚ್ಛತಾ ಆಂದೋಲನ ಹಮ್ಮಿಕೊಳ್ಳಲಾಯಿತು. ಸಂಸ್ಥೆಯ ಅಧ್ಯಕ್ಷರು, ಕಾರ್ಯನಿರ್ವಾಹಕ ನಿರ್ದೇಶಕಿ, ಪ್ರಾಂಶುಪಾಲರು, ಬೋಧಕ?ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಸ್ವಚ್ಛತಾ ಕಾರ್ಯದಲ್ಲಿ ಭಾಗವಹಿಸಿದರು. ಶಾಲಾ ಆವರಣವನ್ನು ಸ್ವಚ್ಛಗೊಳಿಸುವ ಮೂಲಕ ಸ್ವಚ್ಛತೆಯ ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕಿ ಕುಮಾರಿ ಶ್ರೀಲೇಖಾ, ಪ್ರಾಂಶುಪಾಲರಾದ ನೌಶಾದ್, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಗಾಂಧೀಜಿ ಜಯಂತಿಯ ಅಂಗವಾಗಿ ನಡೆದ ಸ್ವಚ್ಛತಾ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಸ್ವಚ್ಛತೆ, ಶಿಸ್ತು, ಸಾಮಾಜಿಕ ಜವಾಬ್ದಾರಿ ಮತ್ತು ಸಾರ್ವಜನಿಕ ಸ್ಥಳಗಳ ಬಗ್ಗೆ ಕಾಳಜಿ ಬೆಳೆಸುವ ಉದ್ದೇಶದಿಂದ ನಡೆಸಲಾಯಿತು. ಕಾರ್ಯಕ್ರಮದ ಮೂಲಕ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಯವರ ಆದರ್ಶಗಳನ್ನು ಸ್ಮರಿಸುವುದರ ಜೊತೆಗೆ, ಅವುಗಳನ್ನು ಕಾರ್ಯರೂಪಕ್ಕೆ ತರುವ ಪ್ರಯತ್ನ ಮಾಡಲಾಯಿತು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101